ಸಂಪುಟ: 11 ಸಂಚಿಕೆ: 163 ಪುಟ: 4+2 ಬೆಲೆ : 3.00 ಶನಿವಾರ, ಆಗಸ್ಟ್ 01, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 163 Pages : 4+2 Rate : 3.00 Saturday August 01, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಗದಗ ಉತ್ಸವ: ಉಚಿತ ಮಳಿಗೆಗಳಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಉತ್ಸವ2026 ಅಂಗವಾಗಿ ಆಗಸ್ಟ್ 14ರಿಂದ 18ರವರೆಗೆ ನಡೆಯಲಿರುವ ವಸ್ತು ಪ್ರದರ್ಶನದಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಗೆ ಮೀಸಲಿರುವ 20 ಉಚಿತ ಮಳಿಗೆಗಳಿಗೆ ಗದಗ ಜಿಲ್ಲೆಯ ಎಸ್‌ಸಿ, ಎಸ್‌ಟಿ ಹಾಗೂ ಸ್ವಸಹಾಯ ಸಂಘಗಳ (ಎಸ್‌ಎಚ್‌ಜಿ) ಮಹಿಳಾ ಉದ್ಯಮಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ನಿರಂತರ ಉತ್ಪಾದನಾ ಚಟುವಟಿಕೆಯಲ್ಲಿ ತೊಡಗಿರುವ ಎಸ್‌ಸಿ/ಎಸ್‌ಟಿ ಹಾಗೂ ಎಸ್‌ಎಚ್‌ಜಿ ಮಹಿಳಾ ಉದ್ಯಮಿಗಳಿಗೆ ಆದ್ಯತೆ ನೀಡಲಾಗುವುದು. ಆಸಕ್ತ ಮಹಿಳಾ ಉದ್ಯಮಿಗಳು ಆಗಸ್ಟ್ 6ರ ಸಂಜೆ 5 ಗಂಟೆಯೊಳಗೆ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಿರಣ್ ಖಂಒಪಿ (ಕೋಆರ್ಡಿನೇಟರ್), ಮೊ. 8123342965 ಅವರನ್ನು ಸಂಪರ್ಕಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಹೆಪಟೈಟಿಸ್ ಲಸಿಕೆ ನೀಡದಿರುವುದಕ್ಕೆ ಮಹಿಳಾ ಆಯೋಗ ಗರಂ | ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ

# ನರ್ಸಿಂಗ್ ವಿದ್ಯಾರ್ಥಿಗಳ ಆರೋಗ್ಯದೊಂದಿಗೆ ಚೆಲ್ಲಾಟ ಬೇಡ!

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕೆ.ಎಚ್. ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಭೇಟಿ ನೀಡಿದ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ, ನರ್ಸಿಂಗ್ ವಿದ್ಯಾರ್ಥಿಗಳಿಗೆ ಕಡ್ಡಾಯ ಹೆಪಟೈಟಿಸ್ ಲಸಿಕೆ ನೀಡದಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ, ತಕ್ಷಣವೇ ಲಸಿಕೆ ನೀಡುವಂತೆ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ಆಸ್ಪತ್ರೆಯ ವೈದ್ಯಕೀಯ ಸೇವೆ, ಹೆರಿಗೆ ಮತ್ತು ಬಾಣಂತಿಯರ ವಿಭಾಗ, ನರ್ಸಿಂಗ್ ವಿದ್ಯಾರ್ಥಿಗಳ ಕ್ಷೇಮಾಭಿವೃದ್ಧಿ ಹಾಗೂ ಬಿ.ಸಿ.ಎಂ. ಹಾಸ್ಟೆಲ್‌ಗಳ ಸ್ಥಿತಿಗತಿ ಕುರಿತು ಸಮಗ್ರ ಪರಿಶೀಲನೆ ನಡೆಸಿದ ಅವರು, ವೈದ್ಯಾಧಿಕಾರಿಗಳು ಮತ್ತು ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ಕಳೆದ ಮೂರು ವರ್ಷಗಳಲ್ಲಿ ತಾಯಂದಿರ ಸಾವಿನ ಪ್ರಮಾಣ ಅತ್ಯಂತ ಕಡಿಮೆಯಾಗಿರುವುದು ಹಾಗೂ ಗಂಭೀರ ಸ್ಥಿತಿಯಲ್ಲಿರುವ ಬಾಣಂತಿಯರ ಆರೈಕೆಗಾಗಿ ವಿಶೇಷ ವೈದ್ಯಕೀಯ ತಂಡ ರಚಿಸಿರುವುದನ್ನು ಶ್ಲಾಘಿಸಿದ



ಅವರು, ಈ ಮಾದರಿಯನ್ನು ರಾಜ್ಯದ ಎಲ್ಲಾ ಬೋಧಕ ಹಾಗೂ ಜಿಲ್ಲಾ ಆಸ್ಪತ್ರೆಗಳಲ್ಲಿ ಜಾರಿಗೊಳಿಸುವಂತೆ ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಹೇಳಿದರು.

ಬಿಸಿಎಂ ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿಗಳಿಗೆ ಸಮರ್ಪಕ ಆಹಾರ ಹಾಗೂ ನೀರಿನ ಸಮಸ್ಯೆ ಇರುವ ಕುರಿತು ದೂರುಗಳು ಬಂದಿದ್ದು, ಇತ್ತೀಚಿನ ಆಹಾರ ವಿಷಬಾಧೆ ಘಟನೆಗಳ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಗಂಡು ಮಕ್ಕಳ ಜನನ ಪ್ರಮಾಣ ಹೆಚ್ಚುತ್ತಿರುವುದು ಹಾಗೂ ಹೆಣ್ಣು ಮಕ್ಕಳ ಜನನ ಪ್ರಮಾಣ ಕುಸಿಯುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ಅಕ್ರಮ ಲಿಂಗಪತ್ತೆ ಮತ್ತು ಹೆಣ್ಣು ಭ್ರೂಣ ಹತ್ಯೆ ಬಗ್ಗೆ ಜಿಲ್ಲಾಡಳಿತದಿಂದ ಸಮಗ್ರ ವರದಿ ಪಡೆಯಲಾಗುವುದು ಎಂದು ಹೇಳಿದರು.

ಡಿ-ಗ್ರೂಪ್ ಹಾಗೂ ಹೊರಗುತ್ತಿಗೆ ನೌಕರರಿಗೆ ಸೇವಾ ಭದ್ರತೆ, ಪರಿಷ್ಕೃತ ವೇತನ, ಸಮವಸ್ತ್ರ ಸೇರಿದಂತೆ ಮಹಿಳಾ ಸಿಬ್ಬಂದಿಗೆ ಋತುಚಕ್ರ ರಜೆ ಜಾರಿಗೆ ತರಲು ಸರ್ಕಾರದ ಮಟ್ಟದಲ್ಲಿ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಹಟ್ಟಿ, ಹಿಂದುಳಿದ ವರ್ಗಗಳ ಇಲಾಖೆಯ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ್ ಬಿದರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> **ನರ್ಸಿಂಗ್ ವಿದ್ಯಾರ್ಥಿಗಳ ಆರೋಗ್ಯದ ವಿಚಾರದಲ್ಲಿ ಯಾವುದೇ ನಿರ್ಲಕ್ಷ್ಯ ಸಹಿಸುವುದಿಲ್ಲ. ಎಲ್ಲ ವಿದ್ಯಾರ್ಥಿಗಳಿಗೆ ಕೂಡಲೇ ಹೆಪಟೈಟಿಸ್ ಲಸಿಕೆ ನೀಡಬೇಕು.**
> - **ಡಾ. ನಾಗಲಕ್ಷ್ಮಿ ಚೌಧರಿ,** ಅಧ್ಯಕ್ಷೆ, ಕರ್ನಾಟಕ ರಾಜ್ಯ ಮಹಿಳಾ ಆಯೋಗ

## ಮಳೆಗಾಗಿ ವರ್ತಕರ ಪರ್ಜನ್ಯ ಹೋಮ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಮುಂಗಾರು ಮಳೆ ಕೈಕೊಟ್ಟ ಪರಿಣಾಮ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ರೈತರ ಬದುಕು ಸುಧಾರಿಸಲಿ ಹಾಗೂ ಉತ್ತಮ ಮಳೆಯಾಗಲಿ ಎಂಬ ಆಶಯದೊಂದಿಗೆ ಹಗರಿಬೊಮ್ಮನಹಳ್ಳಿ ಎಪಿಎಂಸಿ ಆವರಣದಲ್ಲಿ ಆಹಾರ ಧಾನ್ಯ ವರ್ತಕರ ಸಂಘದ ವತಿಯಿಂದ ಗುರುವಾರ ಪರ್ಜನ್ಯ ಹೋಮ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ಆಹಾರ ಧಾನ್ಯ ವರ್ತಕರ ಸಂಘದ ಅಧ್ಯಕ್ಷ ಅಂಬಾಡಿ ಮಹೇಶ್, ಮುಂಗಾರು ಮಳೆ ಸಂಪೂರ್ಣವಾಗಿ ಕೈಕೊಟ್ಟಿರುವುದರಿಂದ ರೈತರ ಬದುಕು ಚಿಂತಾಜನಕವಾಗಿದೆ. ಭಾರತವು ಸನಾತನ ಸಂಸ್ಕೃತಿಯ ದೇಶವಾಗಿದ್ದು, ಮಳೆ ಕೊರತೆಯಾದಾಗ ವರುಣ ದೇವನಿಗೆ ಪೂಜೆ-ಹೋಮಗಳನ್ನು ನಡೆಸುವ ಪರಂಪರೆ ಇದೆ. ಅದೇ ನಿಟ್ಟಿನಲ್ಲಿ ಜನಕಲ್ಯಾಣ ಹಾಗೂ ರೈತರ ಹಿತದೃಷ್ಟಿಯಿಂದ ಪರ್ಜನ್ಯ ಹೋಮ ಆಯೋಜಿಸಲಾಗಿದೆ, ಎಂದು ಹೇಳಿದರು.

ಚೇಂಬರ್ ಆಫ್ ಕಾಮರ್ಸ್ ಉಪಾಧ್ಯಕ್ಷ ಪ್ರಕಾಶ್ ಗೌಡ ಮಾತನಾಡಿ, ಈ ವೇಳೆಗೆ ಬೆಳೆಗಳು ಉತ್ತಮ ಹಂತದಲ್ಲಿರಬೇಕಾಗಿತ್ತು. ಆದರೆ ಮಳೆಯ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದು, ಮುಂದಿನ ದಿನಗಳಲ್ಲಿ ಎಪಿಎಂಸಿಗೆ ಆಹಾರ ಧಾನ್ಯಗಳ ಆಗಮನವೂ ಕುಂಠಿತವಾಗುವ ಆತಂಕ ಎದುರಾಗಿದೆ. ಈ ಪರಿಸ್ಥಿತಿ ಬದಲಾಗಲೆಂಬ ಆಶಯದಿಂದ ಪರ್ಜನ್ಯ ಹೋಮ ಕೈಗೊಳ್ಳಲಾಗಿದೆ, ಎಂದರು.

ಬೆಳಿಗ್ಗೆ 7 ಗಂಟೆಗೆ ಆರಂಭವಾದ ಪರ್ಜನ್ಯ ಹೋಮ ಮಧ್ಯಾಹ್ನ 1 ಗಂಟೆಯವರೆಗೆ ನಡೆಯಿತು. ಬ್ರಾಹ್ಮಣ ಪುರೋಹಿತ ವೆಂಕಟೇಶ್ ಹಾಗೂ ತಂಡ ಪೂಜಾ ವಿಧಿವಿಧಾನಗಳನ್ನು ನೆರವೇರಿಸಿದರು. ಬಳಿಕ ವರ್ತಕರಿಂದ ಪ್ರಸಾದ ವ್ಯವಸ್ಥೆ ಮಾಡಲಾಗಿದ್ದು, ರೈತರು, ಎಪಿಎಂಸಿ ಸಿಬ್ಬಂದಿ, ಹಮಾಲರು ಹಾಗೂ ವರ್ತಕರು ಪ್ರಸಾದ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ಆಹಾರ ಧಾನ್ಯ ವರ್ತಕರ ಸಂಘದ ಉಪಾಧ್ಯಕ್ಷ ಒಂಟಿಗೋಡಿ ಚನ್ನಬಸಪ್ಪ, ಬಂಡಿಹಳ್ಳಿ ಉಪ್ಪಾರ ರಾಮಪ್ಪ, ಅರಳಿಹಳ್ಳಿ ಪೋತಗುಳ್ಳಿ ನಾಗರಾಜ, ದೇವರೆಡ್ಡಿ, ಶಿವಣ್ಣ, ಚಿಂತ್ರಪಳ್ಳಿ ಪ್ರಕಾಶ್, ಖಜಾಂಚಿ ಹನುಮರೆಡ್ಡಿ, ಕಾರ್ಯದರ್ಶಿ ವೆಂಕಟೇಶ್, ಪರಶುರಾಮ್, ಸತೀಶ್, ಪ್ರಸನ್ನ, ಟಿ. ಬಸವರಾಜ್, ಮಾರುತಿ ಶೆಟ್ರು, ಮಲ್ಲಣ್ಣ, ರಾಕೇಶ್ ಮನೋಹರ, ರಾಜಶೇಖರ್, ಶಿವು, ಕಂಠಿ ಶಿವು, ಎಂ.ಸಿ. ನಾಗರಾಜ್, ಎಲ್.ಟಿ.ಪಿ. ಬಸವರಾಜ್, ರಾಘವೇಂದ್ರ, ಸೇರಿದಂತೆ ವರ್ತಕರು ಹಾಗೂ ಅವರ ಕುಟುಂಬದವರು ಭಾಗವಹಿಸಿದ್ದರು.

## ಹಡಪದ ಅಪ್ಪಣ್ಣನವರ ವಚನಗಳು ಬದುಕಿನ ದಾರಿದೀಪ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



12ನೇ ಶತಮಾನದ ಮಹಾನ್ ಶಿವಶರಣ ನಿಜಶರಣ ಹಡಪದ ಅಪ್ಪಣ್ಣನವರು ಸಾರಿದ ಸಮಾನತೆ, ಕಾಯಕ, ದಾಸೋಹ ಹಾಗೂ ಮಾನವೀಯ ಮೌಲ್ಯಗಳು ಇಂದಿಗೂ ಪ್ರಸ್ತುತವಾಗಿವೆ. ಅವರ ವಚನಗಳು ಬದುಕನ್ನು ರೂಪಿಸುವ ಜೀವನ ಮಾರ್ಗದರ್ಶನವಾಗಿದ್ದು, ಪ್ರತಿಯೊಬ್ಬರೂ ಅವುಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು, ಎಂದು ಕೆಜಿಎಸ್ ಶಾಲೆಯ ಮುಖ್ಯ ಶಿಕ್ಷಕ ಎಸ್ .ಬಿ. ಗವಿ ಹೇಳಿದರು. ಸಮೀಪದ ಜಕ್ಕಲಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ಸಂಕೀರ್ಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ನಿಜಶರಣ ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಡಪದ ಅಪ್ಪಣ್ಣನವರು ವಿಜಯಪುರ ಜಿಲ್ಲೆಯ ಮಸಬಿನಾಳ ಗ್ರಾಮದಲ್ಲಿ ಜನಿಸಿ, ಕಲ್ಯಾಣದಲ್ಲಿ ಜಗಜ್ಯೋತಿ ಬಸವೇಶ್ವರರ ಆಪ್ತ ಕಾರ್ಯದರ್ಶಿ ಹಾಗೂ ದ್ವಾರಪಾಲಕರಾಗಿ ಸೇವೆ ಸಲ್ಲಿಸಿದ್ದರು. ಶರಣ ಚಳವಳಿಯಲ್ಲಿ ಮಹತ್ವದ ಪಾತ್ರ ವಹಿಸಿದ ಅವರು, 250ಕ್ಕೂ ಅಧಿಕ ವಚನಗಳನ್ನು ರಚಿಸುವ ಮೂಲಕ ಸಮಾನತೆ, ಕಾಯಕ, ದಾಸೋಹ ಮತ್ತು ಮೂಢನಂಬಿಕೆ ನಿರ್ಮೂಲನೆಯ ಸಂದೇಶವನ್ನು ಸಮಾಜಕ್ಕೆ ಸಾರಿದರು ಎಂದು ತಿಳಿಸಿದರು.

ಶರಣೆ ಲಿಂಗಮ್ಮ ಅವರೂ ಅನುಭವ ಮಂಟಪದಲ್ಲಿ ಸಕ್ರಿಯವಾಗಿ ಪಾಲ್ಗೊಂಡು 114ಕ್ಕೂ ಹೆಚ್ಚು ವಚನಗಳನ್ನು ರಚಿಸಿ ವಚನ ಸಾಹಿತ್ಯಕ್ಕೆ ಅಪಾರ ಕೊಡುಗೆ ನೀಡಿದರು. ಕಲ್ಯಾಣ ಕ್ರಾಂತಿಯ ಬಳಿಕ ತಂಗಡಿಗಿಯಲ್ಲಿ ನೆಲೆಸಿದ್ದ ಹಡಪದ ಅಪ್ಪಣ್ಣನವರು, ಬಸವೇಶ್ವರರ ಲಿಂಗೈಕ್ಯದ ಸುದ್ದಿ ತಿಳಿದು ತಾವೂ ಲಿಂಗೈಕ್ಯರಾದರು. ತಂಗಡಿಗಿಯಲ್ಲಿರುವ ಹಡಪದ ಅಪ್ಪಣ್ಣ ಹಾಗೂ ಶರಣೆ ಲಿಂಗಮ್ಮ ಅವರ ಗದ್ದುಗೆಗಳು ಇಂದಿಗೂ ಶರಣ ಸಂಸ್ಕೃತಿಯ ಪವಿತ್ರ ಕ್ಷೇತ್ರಗಳಾಗಿವೆ ಎಂದು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಂಸಿಎಸ್ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಅಂದಪ್ಪ ಮಾದರ ವಹಿಸಿದ್ದರು. ಕೆಜಿಎಸ್ ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ವೀರಪ್ಪ ಮುಕ್ಕಣ್ಣವರ ಅತಿಥಿಯಾಗಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಎಚ್ .ಎಸ್ . ಬಿಂಗಿ, ಎಸ್ .ಎ. ತಾಳಿಕೋಟಿ, ಎಸ್ .ಎ. ಪಲ್ಲೇದ, ಪಿ.ಜಿ. ಹುಯಿಲಗೋಳ, ಎಸ್ .ಎಲ್. ರೆಡ್ಡಿ, ಎ.ಪಿ. ಶೆಟ್ಟರ, ಸಿ.ಎಸ್ . ಬೆಳ್ಳಟ್ಟಿ, ಬಡಿಗೇರ, ಸಿ.ಎಸ್ . ಗೋಡೆಸವಾರ, ಎ.ಎಸ್. ಸೂರುಭಟ್ಟನವರ ಸೇರಿದಂತೆ ಸಂಕೀರ್ಣದ ಮೂರು ಶಾಲೆಗಳ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಗುರುಪೂರ್ಣಿಮೆ ಮಹೋತ್ಸವದಲ್ಲಿ ಗುರುಭಕ್ತಿಯ ಮಹತ್ವ ಸಾರಿದ ಚನ್ನವೀರ ಶ್ರೀ

## ಗುರುವಿಗಿಂತ ಶ್ರೇಷ್ಠವಾದುದು ಮತ್ತೊಂದಿಲ್ಲ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಗುರು-ಶಿಷ್ಯ ಪರಂಪರೆ ಉಳಿದಿರುವವರೆಗೆ ಭಾರತೀಯ ಸಂಸ್ಕೃತಿ, ಆಧ್ಯಾತ್ಮಿಕತೆ ಹಾಗೂ ಜ್ಞಾನದ ಜ್ಯೋತಿ ಅಕ್ಷುಣ್ಣವಾಗಿ ಬೆಳಗುತ್ತದೆ. ಗುರುವಿಗಿಂತ ಶ್ರೇಷ್ಠವಾದುದು ಮತ್ತೊಂದಿಲ್ಲ. ಗುರುವೇ ಜ್ಞಾನದ ಬೆಳಕು, ಬದುಕಿನ ದಾರಿದೀಪ, ಎಂದು ಹೂವಿನ ಶಿಗ್ಲಿ ವಿರಕ್ತಮಠದ ಅಧ್ಯಕ್ಷರಾದ ಪೂಜ್ಯ ಶ್ರೀ ಚನ್ನವೀರ ಮಹಾಸ್ವಾಮೀಜಿ ಹೇಳಿದರು.

ಗುರುಪೂರ್ಣಿಮೆ ಅಂಗವಾಗಿ ಹೂವಿನ ಶಿಗ್ಲಿ ವಿರಕ್ತಮಠದಲ್ಲಿ ನಡೆದ ಗುರುಪೂಜಾ ಮಹೋತ್ಸವದಲ್ಲಿ ಆಶೀರ್ವಚನ ನೀಡಿದ ಅವರು, ಭಾರತೀಯ ಸಂಸ್ಕೃತಿಯಲ್ಲಿ ಗುರುವಿಗೆ ದೈವಿಕ ಸ್ಥಾನವಿದ್ದು, ಸಂತರು, ಮಹಾಂತರು ಹಾಗೂ ಸಾಧಕರು ಗುರುಭಕ್ತಿಯ ಮಹಿಮೆಯನ್ನು ವಿಶ್ವಕ್ಕೆ ಸಾರಿದ್ದಾರೆ. ಇದೇ ಕಾರಣಕ್ಕೆ ಗುರುಪೂರ್ಣಿಮೆಯನ್ನು ವ್ಯಾಸಪೂರ್ಣಿಮೆ ಎಂದೂ ಆಚರಿಸಲಾಗುತ್ತದೆ ಎಂದು ತಿಳಿಸಿದರು.

ಆಚಾರ್ಯ ದೇವೋ ಭವ ಎಂಬ ಸಂದೇಶವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಗುರುಪೂರ್ಣಿಮೆ ಕೇವಲ ಗುರುಪೂಜೆಯ ದಿನವಲ್ಲ; ಜ್ಞಾನಕ್ಕೆ ಕೃತಜ್ಞತೆ ಸಲ್ಲಿಸುವ, ಗುರು ತೋರಿದ ಸನ್ಮಾರ್ಗದಲ್ಲಿ ನಡೆಯುವ ಹಾಗೂ ಸಮಾಜಕ್ಕೆ ಜ್ಞಾನದ ಬೆಳಕು ಹಂಚುವ ಸಂಕಲ್ಪದ ದಿನವಾಗಿದೆ ಎಂದು ಶ್ರೀಗಳು ಹೇಳಿದರು.

ಈ ಸಂದರ್ಭದಲ್ಲಿ ಬೀದರ್ ಜಿಲ್ಲೆಯ ಸೋನಾಳ ಗ್ರಾಮದ ಲೋಕೇಶ್ ಧನರಾಜ ಹನುಮಶೆಟ್ಟಿ ಹಾಗೂ ಶಿವಕುಮಾರ ದಂಪತಿ ಶ್ರೀಗಳ ಪಾದಪೂಜೆ ನೆರವೇರಿಸಿ ಆಶೀರ್ವಾದ ಪಡೆದರು. ಬಳಿಕ ಲೋಕೇಶ್ ಧನರಾಜ ಹನುಮಶೆಟ್ಟಿಯವರು ವಿದ್ಯಾರ್ಥಿಗಳಿಗೆ ಶಾಲಾ ಸಮವಸ್ತ್ರ ವಿತರಿಸಿದರು. ಅವರ ಸಮಾಜಮುಖಿ ಸೇವೆಯನ್ನು ಗುರುತಿಸಿ ವೇದಿಕೆಯಲ್ಲಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರಾದ ನಾಗೇಂದ್ರ ಕೊಳ್ಳಿ, ಮಾರುತಿ ಕೊಳ್ಳಿ, ಎಲ್.ಎಸ್ . ಅರಳಹಳ್ಳಿ, ಎಸ್ .ಎಚ್ . ಪೂಜಾರ್, ಎನ್ . ನೆಗಳೂರು ಹಾಗೂ ಎಂ.ಜಿ. ಆರಾಧ್ಯ ಅವರನ್ನು ಸನ್ಮಾನಿಸಲಾಯಿತು. ಅಲ್ಲದೆ ಮ್ಯಾಜಿಕ್ ಬುಕ್ ಆಫ್ ರೆಕಾರ್ಡ್ಸ್ ಪ್ರಶಸ್ತಿ ಪುರಸ್ಕೃತ ಗುರುಕುಲ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಆರ್.ಜಿ. ಚಿಕ್ಕಮ್ಮಠ ಅವರನ್ನೂ ಗೌರವಿಸಲಾಯಿತು.

ಪ್ರಧಾನ ಗುರುಗಳಾದ ಪಿ.ಎಚ್ . ಪಾಟೀಲ, ಎನ್ .ಬಿ. ನಾಗರಹಳ್ಳಿ ಹಾಗೂ ಮಹಾದೇವ ಬಿಷ್ಟಣ್ಣವರ ಉಪಸ್ಥಿತರಿದ್ದರು. ಕೆ.ಎಸ್ . ಇಟಗಿಮಠ ಕಾರ್ಯಕ್ರಮ ನಿರೂಪಿಸಿದರು.

### ಅನ್ಯಾಯ ಎದುರಾದರೆ ಕೂಡಲೇ ದೂರು ನೀಡಿ; ಡಾ. ನಾಗಲಕ್ಷ್ಮಿ ಚೌಧರಿ

# ದೌರ್ಜನ್ಯ ಸಹಿಸಬೇಡಿ... ಧೈರ್ಯವಾಗಿ ಧ್ವನಿ ಎತ್ತಿ!

**ವಿಜಯಸಾಕ್ಷಿ ಸುದ್ದಿ, ಗದಗ**




ದೇಶದ ಅಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಅತ್ಯಂತ ಮಹತ್ವದ್ದು. ಮಹಿಳೆಯರು ಯಾವುದೇ ರೀತಿಯ ಅನ್ಯಾಯ, ದೌರ್ಜನ್ಯ ಅಥವಾ ಲೈಂಗಿಕ ಕಿರುಕುಳವನ್ನು ಸಹಿಸಿಕೊಳ್ಳದೆ ಧೈರ್ಯವಾಗಿ ಧ್ವನಿ ಎತ್ತಬೇಕು. ಮೌನವಾಗಿರುವುದು ಸಮಸ್ಯೆಗೆ ಪರಿಹಾರವಲ್ಲ, ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆ-2013 (ಕಣಖಿಐ ಅ್ಚಿಠಿ) ಕುರಿತ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೆಣ್ಣುಮಕ್ಕಳು ಗುಣಮಟ್ಟದ ಶಿಕ್ಷಣ ಪಡೆದು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು. ಮಹಿಳೆಯರ ಪ್ರಗತಿಗೆ ಪುರುಷರ ಸಹಕಾರವೂ ಅಗತ್ಯವಾಗಿದೆ. ಕೆಲಸದ ಸ್ಥಳದಲ್ಲಿ ಲೈಂಗಿಕ ದೌರ್ಜನ್ಯ ನಡೆದರೆ ಪೋಶ್ ಕಾಯ್ದೆಯಡಿ ರಚಿಸಲಾದ ಆಂತರಿಕ ದೂರು ಸಮಿತಿಗೆ ದೂರು ಸಲ್ಲಿಸಿ ನ್ಯಾಯ ಪಡೆಯಬಹುದು. ಆದರೆ ಕಾಯ್ದೆಯ ಸದ್ಬಳಕೆಯಾಗಬೇಕು, ದುರ್ಬಳಕೆಯಾಗಬಾರದು ಎಂದು ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳಲ್ಲಿ ಕೆಲಸ ಮಾಡುವ ಮಹಿಳೆಯರಿಗೂ ಪೋಶ್ ಕಾಯ್ದೆ ಅನ್ವಯವಾಗುತ್ತದೆ. ದೂರು ಸಮಿತಿಗೆ ಸಿವಿಲ್ ನ್ಯಾಯಾಲಯದ ಅಧಿಕಾರವಿದ್ದು, ಉದ್ದೇಶಪೂರ್ವಕವಾಗಿ ಸುಳ್ಳು ದೂರು ನೀಡಿದರೆ ದೂರುದಾರರ ವಿರುದ್ಧವೂ ಕ್ರಮ ಕೈಗೊಳ್ಳುವ ಅವಕಾಶವಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಮಹಿಳೆಯರ ಮೇಲಿನ ದೌರ್ಜನ್ಯವನ್ನು ಸಹಿಸಿಕೊಳ್ಳುವುದೂ ತಪ್ಪು. ಅನ್ಯಾಯ ನಡೆದಾಗ ಮೌನವಾಗದೆ, ಅದರ ವಿರುದ್ಧ ಕಾನೂನಾತ್ಮಕವಾಗಿ ಹೋರಾಡುವ ಮನೋಭಾವವನ್ನು ಪ್ರತಿಯೊಬ್ಬ ಮಹಿಳೆಯೂ ಬೆಳೆಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿ ಟಿ.ಎಸ್. ಚಂದ್ರಿಕಾ ಅವರು ಪೋಶ್ ಕಾಯ್ದೆಯ ಉದ್ದೇಶ, ದೂರು ಸಲ್ಲಿಸುವ ವಿಧಾನ ಹಾಗೂ ಸಮಿತಿಯ ಅಧಿಕಾರಗಳ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಮಹಿಳಾ ಆಯೋಗದ ಕಾರ್ಯದರ್ಶಿ ರೂಪಾ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಮಣ್ಣೂರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಯಶ್ರೀ ಆರ್., ವಿವಿಧ ಇಲಾಖೆಗಳ ಅಧಿಕಾರಿಗಳು, ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

> **ಮಹಿಳೆಯರು ಅನ್ಯಾಯ ಮತ್ತು ದೌರ್ಜನ್ಯವನ್ನು ಸಹಿಸಿಕೊಳ್ಳಬಾರದು. ಕೆಲಸದ ಸ್ಥಳದಲ್ಲಿ ಕಿರುಕುಳ ಎದುರಾದರೆ ಧೈರ್ಯವಾಗಿ ದೂರು ನೀಡಿ ನ್ಯಾಯ ಪಡೆಯಬೇಕು.**
> - **ಡಾ. ನಾಗಲಕ್ಷ್ಮಿ ಚೌಧರಿ,** ಅಧ್ಯಕ್ಷೆ, ಕರ್ನಾಟಕ ರಾಜ್ಯ ಮಹಿಳಾ ಆಯೋಗ

### ಮತದಾರರ ವಿಶೇಷ ಸಮಗ್ರ ಪರಿಷ್ಕರಣೆಯಲ್ಲಿ ಜಿಲ್ಲೆಯಲ್ಲೇ ಮೊದಲ ಸ್ಥಾನ

# ಶಿರಹಟ್ಟಿ: ಎಸ್‌ಐಆರ್‌ನಲ್ಲಿ ಶೇ.100 ಸಾಧನೆ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**



ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)-2026 ಕಾರ್ಯದಲ್ಲಿ ಶಿರಹಟ್ಟಿ ವಿಧಾನಸಭಾ ಕ್ಷೇತ್ರ ಶೇ.100 ಪ್ರಗತಿ ಸಾಧಿಸುವ ಮೂಲಕ ಗದಗ ಜಿಲ್ಲೆಯಲ್ಲೇ ಮೊದಲ ಕ್ಷೇತ್ರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಶಿರಹಟ್ಟಿ, ಲಕ್ಷ್ಮೇಶ್ವರ ಹಾಗೂ ಮುಂಡರಗಿ ತಾಲೂಕುಗಳನ್ನು ಒಳಗೊಂಡಿರುವ ಕ್ಷೇತ್ರದಲ್ಲಿ ಒಟ್ಟು 252 ಮತಗಟ್ಟೆ ವ್ಯಾಪ್ತಿಯಲ್ಲಿ 2,30,268 ಎನ್ಯೂಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿತ್ತು. ಜುಲೈ 30ರ ವೇಳೆಗೆ ಎಲ್ಲ ಪ್ರಕ್ರಿಯೆಗಳು ಪೂರ್ಣಗೊಂಡು ಶೇ.100 ಪ್ರಗತಿ ದಾಖಲಾಗಿದೆ.

ಕ್ಷೇತ್ರದಲ್ಲಿ 7,236 ಮೃತ ಮತದಾರರು, 17,787 ಸ್ಥಳಾಂತರಗೊಂಡವರು, 3,427 ದ್ವಿಪಾತ್ರ ಮತದಾರರು, 1,140 ಗೈರು ಮತದಾರರು ಹಾಗೂ ಇತರೆ 56 ಪ್ರಕರಣಗಳು ಸೇರಿ ಒಟ್ಟು 29,646 ದಾಖಲೆಗಳನ್ನು ಪರಿಶೀಲಿಸಿ ಪರಿಷ್ಕರಣೆ ಪ್ರಕ್ರಿಯೆ ಪೂರ್ಣಗೊಳಿಸಲಾಗಿದೆ.

ಈ ಸಾಧನೆಯ ಹಿಂದೆ ಮತದಾರರ ನೋಂದಣಾಧಿಕಾರಿ, ಸಹಾಯಕ ಮತದಾರರ ನೋಂದಣಾಧಿಕಾರಿಗಳು, ಬಿಎಲ್‌ಒಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ನಡೆಸಿದ ಸತತ ಸಭೆಗಳು, ಕ್ಷೇತ್ರ ಭೇಟಿ, ಸಮಸ್ಯೆಗಳ ತ್ವರಿತ ಪರಿಹಾರ ಹಾಗೂ ರಾಜಕೀಯ ಪಕ್ಷಗಳೊಂದಿಗೆ ಸಮನ್ವಯ ಸಭೆಗಳು ಪ್ರಮುಖ ಕಾರಣವಾಗಿವೆ. ಮರಣ ಹೊಂದಿರುವ, ಸ್ಥಳಾಂತರಗೊಂಡಿರುವ, ದ್ವಿಪಾತ್ರ ಹಾಗೂ ಗೈರು ಮತದಾರರ ಪಟ್ಟಿಯ ಕ್ರಾಸ್ ವೆರಿಫಿಕೇಶನ್ ಕಾರ್ಯ ಮುಂದುವರಿದಿದ್ದು, ಅರ್ಹರಿಗೆ ಅಗತ್ಯ ದಾಖಲೆಗಳ ಆಧಾರದಲ್ಲಿ ಮತದಾರರ ಪಟ್ಟಿಗೆ ಸೇರ್ಪಡೆಗೆ ಅವಕಾಶ ಕಲ್ಪಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

> **ಕ್ಷೇತ್ರದ ಸಹಾಯಕ ಮತದಾರರ ನೋಂದಣಾಧಿಕಾರಿಗಳು, ನೋಡಲ್ ಅಧಿಕಾರಿಗಳು, ಬಿಎಲ್‌ಒಗಳು ಹಾಗೂ ರಾಜಕೀಯ ಪಕ್ಷಗಳ ಸಹಕಾರದಿಂದ ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ಎಸ್‌ಐಆರ್ ಕಾರ್ಯದಲ್ಲಿ ಶೇ.100 ಪ್ರಗತಿ ಸಾಧಿಸಲು ಸಾಧ್ಯವಾಗಿದೆ.**
> - **ನಂದಾ ಹಣಬರಟ್ಟಿ,** ಮತದಾರರ ನೋಂದಣಾಧಿಕಾರಿ ಹಾಗೂ ಸಮಾಜ ಕಲ್ಯಾಣ ಉಪನಿರ್ದೇಶಕಿ

> **ಬಿಎಲ್‌ಒಗಳು, ವಿಎಗಳು, ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು, ಪಿಡಿಒಗಳು, ಇಒಗಳು, ಸ್ವಸಹಾಯ ಸಂಘಗಳ ಪದಾಧಿಕಾರಿಗಳು ಹಾಗೂ ರಾಜಕೀಯ ಪಕ್ಷಗಳ ಸಹಕಾರದಿಂದ ಈ ಸಾಧನೆ ಸಾಧ್ಯವಾಗಿದೆ.**
> - **ತಹಸೀಲ್ದಾರ,** ಶಿರಹಟ್ಟಿ (ಸಹಾಯಕ ಮತದಾರರ ನೋಂದಣಾಧಿಕಾರಿ)

## ಎಸ್‌ಐಆರ್: ಗದಗ ಜಿಲ್ಲೆಯಲ್ಲಿ ಶೇ.86ಕ್ಕೂ ಹೆಚ್ಚು ಪ್ರಗತಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ವೇಗ ಪಡೆದುಕೊಂಡಿದ್ದು, ಜುಲೈ 30ರವರೆಗೆ 7,79,550 ಎನ್ಯುಮರೇಷನ್ ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದೆ.

ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಹಾಗೂ 967 ಮತಗಟ್ಟೆಗಳು ಇದ್ದು, ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಬೂತ್ ಮಟ್ಟದ ಅಧಿಕಾರಿಗಳು (ಬಿ.ಎಲ್.ಒ.) ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸುತ್ತಿದ್ದಾರೆ.

ಜುಲೈ 30ರ ವೇಳೆಗೆ 9,02,947 ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದ್ದು, ಅವುಗಳಲ್ಲಿ 7,79,550 ಫಾರ್ಮ್‌ಗಳನ್ನು ಡಿಜಿಟಲೀಕರಣ ಮಾಡಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

ಮತದಾರರ ಅನುಕೂಲಕ್ಕಾಗಿ ಮನೆ ಮನೆಗೆ ತೆರಳಿ ಎನ್ಯುಮರೇಷನ್ ಫಾರ್ಮ್ ವಿತರಿಸುವ ಕಾರ್ಯವನ್ನು ಆಗಸ್ಟ್ 8ರವರೆಗೆ ವಿಸ್ತರಿಸಲಾಗಿದ್ದು, ಮತದಾರರು ಅಗತ್ಯ ಮಾಹಿತಿಯನ್ನು ಭರ್ತಿ ಮಾಡಿ ಬಿ.ಎಲ್.ಒ.ಗಳಿಗೆ ಸಲ್ಲಿಸುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.

### ಸಂಕ್ಷಿಪ್ತ ಸುದ್ದಿಗಳು

# ಗಜೇಂದ್ರಗಡ ಪುರಸಭೆ ಖಡಕ್ ಎಚ್ಚರಿಕೆ ಪ್ಲಾಸ್ಟಿಕ್‌ಗೆ ಬ್ರೇಕ್ ಹಾಕಿ... ಇಲ್ಲದಿದ್ದರೆ ಭಾರಿ ದಂಡ ಗ್ಯಾರಂಟಿ!




**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಏಕಬಳಕೆಯ ಪ್ಲಾಸ್ಟಿಕ್ ಉತ್ಪನ್ನಗಳ ಉತ್ಪಾದನೆ, ಸಂಗ್ರಹಣೆ, ವಿತರಣೆ, ಮಾರಾಟ ಹಾಗೂ ಬಳಕೆಯ ವಿರುದ್ಧ ಗಜೇಂದ್ರಗಡ ಪುರಸಭೆ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದ್ದು, ನಿಯಮ ಉಲ್ಲಂಘಿಸುವವರ ವಿರುದ್ಧ ನಿಷೇಧಿತ ವಸ್ತುಗಳನ್ನು ವಶಪಡಿಸಿಕೊಳ್ಳುವುದರ ಜೊತೆಗೆ ಭಾರಿ ದಂಡ ವಿಧಿಸಿ, ಅಗತ್ಯವಿದ್ದರೆ ಕೈಗಾರಿಕೆಗಳನ್ನು ಮುಚ್ಚುವ ಕ್ರಮವನ್ನೂ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದೆ.

ಕೇಂದ್ರ ಸರ್ಕಾರದ ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ (ತಿದ್ದುಪಡಿ) ನಿಯಮಗಳು2021ರ ಅನ್ವಯ ಪ್ಲಾಸ್ಟಿಕ್ ಬ್ಯಾನರ್, ಬಂಟಿಂಗ್ಸ್, ಫ್ಲೆಕ್ಸ್, ಕಟೌಟ್, ಧ್ವಜ, ತಟ್ಟೆ, ಕಪ್, ಲೋಟ, ಚಮಚ, ಫೋರ್ಕ್, ಚಾಕು, ಸ್ಟ್ರಾ, ಥರ್ಮಾಕೋಲ್ ಉತ್ಪನ್ನಗಳು, ಪ್ಲಾಸ್ಟಿಕ್ ಪ್ಯಾಕಿಂಗ್ ಫಿಲ್ಮ್, 100 ಮೈಕ್ರಾನ್‌ಗಿಂತ ಕಡಿಮೆ ದಪ್ಪದ ಪ್ಲಾಸ್ಟಿಕ್ ಹಾಗೂ ಪಿವಿಸಿ ಬ್ಯಾನರ್ ಸೇರಿದಂತೆ ಹಲವು ಏಕಬಳಕೆಯ ಪ್ಲಾಸ್ಟಿಕ್ ವಸ್ತುಗಳನ್ನು ದೇಶಾದ್ಯಂತ ನಿಷೇಧಿಸಲಾಗಿದೆ.

ಅಂಗಡಿ ಮಾಲೀಕರು, ಬೀದಿ ವ್ಯಾಪಾರಿಗಳು, ವಾಣಿಜ್ಯ ಸಂಸ್ಥೆಗಳು, ಮಾಲ್‌ಗಳು, ಮಾರುಕಟ್ಟೆಗಳು, ಸಿನಿಮಾ ಮಂದಿರಗಳು, ಪ್ರವಾಸಿ ತಾಣಗಳು, ಶಾಲೆ-ಕಾಲೇಜುಗಳು, ಆಸ್ಪತ್ರೆಗಳು, ಕಚೇರಿಗಳು ಹಾಗೂ ಇ-ಕಾಮರ್ಸ್ ಸಂಸ್ಥೆಗಳು ಸೇರಿದಂತೆ ಎಲ್ಲರೂ ಈ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಉಲ್ಲಂಘನೆ ಕಂಡುಬಂದರೆ ಪರಿಸರ (ಸಂರಕ್ಷಣೆ) ಕಾಯ್ದೆ1986ರಡಿ ಪ್ರಕರಣ ದಾಖಲಿಸಿ ನಿಷೇಧಿತ ವಸ್ತುಗಳನ್ನು ವಶಪಡಿಸಿಕೊಳ್ಳಲಾಗುವುದು. ಅಗತ್ಯವಿದ್ದರೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಘಟಕ ಮುಚ್ಚುವ ಕ್ರಮ ಜರುಗಿಸುವುದರ ಜೊತೆಗೆ ಪ್ರತಿ ಟನ್‌ಗೆ ₹5,000 ಪರಿಸರ ಪರಿಹಾರ ಶುಲ್ಕ ವಿಧಿಸಲಾಗುವುದು ಎಂದು ಪುರಸಭೆ ತಿಳಿಸಿದೆ.

**ನಿರ್ಮಾಣ ತ್ಯಾಜ್ಯ ರಸ್ತೆಗೆ ಎಸೆದರೂ ಕಾನೂನು ಕ್ರಮ:** ನಿರ್ಮಾಣ, ನೆಲಸಮ, ದುರಸ್ತಿ ಹಾಗೂ ನವೀಕರಣ ಕಾಮಗಾರಿಗಳಿಂದ ಉಂಟಾಗುವ ತ್ಯಾಜ್ಯವನ್ನು ರಸ್ತೆ, ಕಾಲುವೆ, ಕೆರೆ, ನದಿ, ಖಾಲಿ ಜಾಗ ಅಥವಾ ಸರ್ಕಾರಿ ಭೂಮಿಯಲ್ಲಿ ಎಸೆಯುವುದು ಕಾನೂನುಬಾಹಿರವಾಗಿದೆ ಎಂದು ಪುರಸಭೆ ಮತ್ತೊಮ್ಮೆ ಸ್ಪಷ್ಟಪಡಿಸಿದೆ.

ಕಾಂಕ್ರೀಟ್, ಇಟ್ಟಿಗೆ, ಲೋಹ, ಮರ, ಗಾಜು, ಪ್ಲಾಸ್ಟಿಕ್ ಹಾಗೂ ಮಣ್ಣಿನ ತ್ಯಾಜ್ಯವನ್ನು ಮೂಲದಲ್ಲೇ ಪ್ರತ್ಯೇಕಿಸಿ ಪುರಸಭೆಯ ಅಧಿಕೃತ ವಾಹನ ಅಥವಾ ಮಾನ್ಯತೆ ಪಡೆದ ಸಂಗ್ರಹಣಾ ಹಾಗೂ ಮರುಸಂಸ್ಕರಣಾ ಕೇಂದ್ರಗಳಿಗೆ ಮಾತ್ರ ಒಪ್ಪಿಸಬೇಕು. ದೊಡ್ಡ ನಿರ್ಮಾಣ ಯೋಜನೆಗಳು ನಿರ್ಮಾಣ ಮತ್ತು ಕೆಡುವಿಕೆ ತ್ಯಾಜ್ಯ ನಿರ್ವಹಣಾ ಯೋಜನೆ ರೂಪಿಸಿ ಜಾರಿಗೊಳಿಸುವುದು ಕಡ್ಡಾಯವಾಗಿದೆ.

ನಿಯಮ ಉಲ್ಲಂಘಿಸುವವರ ವಿರುದ್ಧ ಪರಿಸರ ಪರಿಹಾರ ಶುಲ್ಕ ಸೇರಿದಂತೆ ದಂಡ ವಿಧಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಗಜೇಂದ್ರಗಡ ಪುರಸಭೆ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ದೂದ್‌ಸಾಗರ ಟ್ರೆಕ್ಕಿಂಗ್: ಸವಾಲು, ಸ್ನೇಹ, ದಾಂಪತ್ಯ ಮತ್ತು ಪ್ರಕೃತಿಯ ಸೌಂದರ್ಯದ ಸಂಗಮ

# ಪ್ರಕೃತಿಯ ಮಡಿಲಲ್ಲಿ ಒಂದು ಅವಿಸ್ಮರಣೀಯ ಪಯಣ

ಪ್ರಕೃತಿಯ ಸೌಂದರ್ಯವನ್ನು ಆಸ್ವಾದಿಸುವುದಕ್ಕಿಂತ ದೊಡ್ಡ ಸಂತೋಷ ಮತ್ತೊಂದಿಲ್ಲ. ಗದ್ದಲದ ಬದುಕಿನಿಂದ ಕೆಲ ಕ್ಷಣ ದೂರ ಸರಿದು ಹಚ್ಚಹಸಿರು ಕಾಡು, ಬೆಟ್ಟ-ಗುಡ್ಡಗಳು, ಜಲಪಾತಗಳು ಮತ್ತು ಶುದ್ಧ ಗಾಳಿಯ ನಡುವೆ ಹೆಜ್ಜೆ ಹಾಕುವ ಅನುಭವ ಮನಸ್ಸಿಗೆ ಹೊಸ ಚೈತನ್ಯ ನೀಡುತ್ತದೆ. ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸುವುದರ ಜೊತೆಗೆ ಮಾನಸಿಕ ನೆಮ್ಮದಿಯನ್ನೂ ನೀಡುವ ಅತ್ಯುತ್ತಮ ಚಟುವಟಿಕೆ ಟ್ರೆಕ್ಕಿಂಗ್ . ಬಹುದಿನಗಳಿಂದ ದೂದ್‌ಸಾಗರ ಟ್ರೆಕ್ಕಿಂಗ್‌ಗೆ ಹೋಗಬೇಕೆಂಬ ಕನಸು ನನ್ನ ಮನಸ್ಸಿನಲ್ಲಿತ್ತು. ಇತ್ತೀಚೆಗೆ ನನ್ನ ಕಲ್ಪವೃಕ್ಷ ಮಾದರಿ ಶಾಲೆಯ ಸಹೋದ್ಯೋಗಿಗಳು ಮತ್ತು ಸ್ನೇಹಿತರೊಂದಿಗೆ ಆ ಕನಸನ್ನು ನನಸಾಗಿಸಿಕೊಳ್ಳುವ ಸುವರ್ಣಾವಕಾಶ ದೊರೆಯಿತು.

ಆರಂಭದಲ್ಲಿ 26 ಕಿಲೋಮೀಟರ್‌ಗಳ ಈ ಸುದೀರ್ಘ ಚಾರಣಕ್ಕೆ ಕೇವಲ ಆರು ಜನರು ಮಾತ್ರ ಸಿದ್ಧರಾಗಿದ್ದರು. ದಿನಗಳು ಕಳೆದಂತೆ ಉತ್ಸಾಹ ಹೆಚ್ಚುತ್ತಾ ಹೋಯಿತು. ಯುವಕರು, ಸಹೋದ್ಯೋಗಿಗಳು ಹಾಗೂ ಹಿರಿಯರು ಸೇರಿ ಕೊನೆಗೆ 29 ಜನರ ತಂಡ ರೂಪುಗೊಂಡಿತು. ಇಷ್ಟು ದೂರದ ಚಾರಣವನ್ನು ಎಲ್ಲರೂ ಯಶಸ್ವಿಯಾಗಿ ಪೂರ್ಣಗೊಳಿಸಬಹುದೇ ಎಂಬ ಸಣ್ಣ ಆತಂಕ ಮನಸ್ಸಿನಲ್ಲಿತ್ತು. ಕಾಡಿನ ಜಿಗಣೆಗಳು, ಜಾರುವ ಹಾದಿಗಳು, ಅನಿರೀಕ್ಷಿತ ಸವಾಲುಗಳು ಎಲ್ಲವೂ ಎದುರಾಗಬಹುದು ಎಂಬ ಯೋಚನೆ ಸಹಜವಾಗಿಯೇ ಕಾಡುತ್ತಿತ್ತು. ಆದರೆ ಧೈರ್ಯಂ ಸರ್ವತ್ರ ಸಾಧನಂ ಎಂಬ ಆತ್ಮವಿಶ್ವಾಸದೊಂದಿಗೆ ನಾವು ಪಯಣ ಆರಂಭಿಸಿದೆವು.

ಈ ಚಾರಣದ ಅತ್ಯಂತ ವಿಶೇಷ ಸಂಗತಿಯೆಂದರೆ ನನ್ನ ಜೀವನ ಸಂಗಾತಿಯೂ ನನ್ನೊಂದಿಗೆ ಹೆಜ್ಜೆ ಹಾಕಿದ್ದು. ಜೀವನದಲ್ಲಿ ಅನೇಕ ಸುಂದರ ಕ್ಷಣಗಳನ್ನು ನಾವು ಜೊತೆಯಾಗಿ ಕಳೆದಿದ್ದೇವೆ. ಆದರೆ ಪ್ರಕೃತಿಯ ಮಡಿಲಲ್ಲಿ, ಹಚ್ಚಹಸಿರು ಕಾಡಿನ ನಡುವೆ, ಒಬ್ಬರಿಗೊಬ್ಬರು ಧೈರ್ಯ ತುಂಬುತ್ತಾ, ಆಯಾಸವನ್ನು ನಗುವಿನಲ್ಲೇ ಮರೆತು, ಕಲ್ಲಿನ ಹಾದಿಗಳಲ್ಲಿ ಕೈಹಿಡಿದು ಸಾಗಿದ ಆ ಕ್ಷಣಗಳು ನಮ್ಮ ದಾಂಪತ್ಯ ಜೀವನದ ಮರೆಯಲಾಗದ ನೆನಪುಗಳಾಗಿ ಉಳಿದಿವೆ. ಈ ಚಾರಣ ನಮ್ಮಿಬ್ಬರ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸಿತು.

ಬೆಳಗಿನ ಜಾವ 5 ಗಂಟೆಗೆ ರಾಜಕುಮಾರ ಬಸ್‌ನಲ್ಲಿ ನಮ್ಮ ಪ್ರಯಾಣ ಆರಂಭವಾಯಿತು. ಬಸ್‌ನೊಳಗೆ ಹಾಡು, ನೃತ್ಯ, ಹರಟೆ, ನಗು ಹಾಗೂ ಸ್ನೇಹಿತರ ಮಾತುಕತೆಗಳು ಪ್ರಯಾಣದ ಉತ್ಸಾಹವನ್ನು ಇಮ್ಮಡಿಗೊಳಿಸಿದವು. ಕಿಟಕಿಯಾಚೆ ಕಾಣುತ್ತಿದ್ದ ಹಸಿರು ಬೆಟ್ಟಗಳು, ದಟ್ಟ ಕಾಡು, ತಂಪಾದ ಗಾಳಿ ಹಾಗೂ ಪಕ್ಷಿಗಳ ಕಲರವ ಪ್ರಕೃತಿಯ ಮಡಿಲಿಗೆ ನಮ್ಮನ್ನು ಕರೆದೊಯ್ಯುತ್ತಿದ್ದವು. ಗಮ್ಯಸ್ಥಾನಕ್ಕಿಂತಲೂ ಪ್ರಯಾಣವೇ ಹೆಚ್ಚು ಸುಂದರವಾಗಿ ಭಾಸವಾಗುತ್ತಿತ್ತು. ಪ್ರತಿಯೊಂದು ತಿರುವಿನಲ್ಲೂ ಪ್ರಕೃತಿ ಹೊಸ ಸೊಬಗನ್ನು ಅನಾವರಣಗೊಳಿಸುತ್ತಿತ್ತು.

ಬೆಳಿಗ್ಗೆ ಸುಮಾರು 10.30ಕ್ಕೆ ಗೋವಾದ ಕುಲೆಂ ತಲುಪಿದೆವು. ಉಪಹಾರ ಸೇವಿಸಿ, ಮಧ್ಯಾಹ್ನದ ಊಟವನ್ನು ಪ್ಯಾಕ್ ಮಾಡಿಕೊಂಡು ಟ್ರೆಕ್ಕಿಂಗ್‌ಗೆ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಿದೆವು. ನಂತರ ಜೀಪ್‌ಗಳ ಮೂಲಕ ಅರಣ್ಯದ ಪ್ರವೇಶದ್ವಾರ ತಲುಪಿ ಸುಮಾರು 11 ಗಂಟೆಗೆ ನಿಜವಾದ ಚಾರಣ ಆರಂಭಿಸಿದೆವು.

ಆರಂಭದಲ್ಲಿ ಬೆಟ್ಟದ ಕಿರಿದಾದ ಹಾದಿಗಳಲ್ಲಿ ನಡೆಯುವುದು ಸ್ವಲ್ಪ ಕಷ್ಟವೆನಿಸಿತು. ಆದರೆ ಸ್ನೇಹಿತರ ಪ್ರೋತ್ಸಾಹ ಮತ್ತು ಪರಸ್ಪರ ಸಹಕಾರದಿಂದ ಹೆಜ್ಜೆಗೆ ಹೆಜ್ಜೆ ಸೇರಿಸುತ್ತಾ ಮುಂದೆ ಸಾಗುತ್ತಿದ್ದೆವು. ಹಾದಿಯುದ್ದಕ್ಕೂ ಹರಿಯುವ ಝರಿಗಳು, ಕಲ್ಲುಗಳ ನಡುವೆ ಕಲಕಲನೆ ಹರಿಯುವ ಹೊಳೆಗಳು, ಎತ್ತರದ ಮರಗಳು ಹಾಗೂ ದಟ್ಟವಾದ ಕಾಡಿನ ಸೊಬಗು ಮನಸ್ಸನ್ನು ಮಂತ್ರಮುಗ್ಧಗೊಳಿಸಿತು. ಕೆಲವೆಡೆ ಜಾರುವ ಕಲ್ಲುಗಳು ಮತ್ತು ಕಠಿಣ ಹಾದಿಗಳು ಸವಾಲು ಹಾಕಿದರೂ ಯಾರೂ ಧೈರ್ಯ ಕಳೆದುಕೊಳ್ಳಲಿಲ್ಲ.

ಫೋಟೋಗಳು, ಸೆಲ್ಫಿಗಳು, ವಿಡಿಯೊಗಳು ಹಾಗೂ ಮೋಜು-ಮಸ್ತಿಯ ನಡುವೆ ನಮ್ಮ ಪಯಣ ಸಾಗುತ್ತಲೇ ಇತ್ತು. ನದಿ ನೀರಿನ ನಿನಾದ, ಪುಟ್ಟ ಝರಿಗಳ ಕಲಕಲ ಶಬ್ದ ಹಾಗೂ ಸ್ಫಟಿಕದಷ್ಟು ನಿರ್ಮಲವಾದ ತಂಪು ನೀರು ನಮ್ಮ ಆಯಾಸವನ್ನು ಕ್ಷಣಾರ್ಧದಲ್ಲಿ ದೂರ ಮಾಡುತ್ತಿತ್ತು. ಪ್ರಕೃತಿಯೇ ತನ್ನ ಅಮೃತವನ್ನು ಉಣಬಡಿಸುತ್ತಿರುವಂತೆ ಭಾಸವಾಗುತ್ತಿತ್ತು.

ಸುಮಾರು 15 ಕಿಲೋಮೀಟರ್ ನಡೆದ ಬಳಿಕ ಒಂದು ಪುಟ್ಟ ಗುಡಿಸಲು ಕಂಡಿತು. ಅಲ್ಲಿ ಚಹಾ ಮತ್ತು ಮ್ಯಾಗಿ ದೊರೆಯುತ್ತಿತ್ತು. ನಾವು ತಂದಿದ್ದ ತಿಂಡಿಗಳನ್ನು ಸೇವಿಸಿ ಮತ್ತೆ ಪಯಣ ಮುಂದುವರಿಸಿದೆವು. ಹ್ಯಾಂಗಿಂಗ್ ಬ್ರಿಜ್, ಉಕ್ಕಿನ ಸೇತುವೆ, ರಭಸವಾಗಿ ಹರಿಯುವ ನೀರು, ದಾರಿಗೆ ಅಡ್ಡಬಿದ್ದ ಮರಗಳು ಹಾಗೂ ಅಲ್ಲಲ್ಲಿ ಕಂಡುಬರುವ ವಾನರಸೇನೆ ನಮ್ಮ ಗಮನ ಸೆಳೆಯಿತು. ಆಹಾರದ ಚೀಲಗಳ ಮೇಲೆ ಕಣ್ಣಿಟ್ಟಿದ್ದ ಆ ವಾನರಗಳು ಪ್ರವಾಸಿಗರಿಗೆ ಹೊಸ ಅನುಭವವನ್ನೇ ನೀಡುತ್ತಿದ್ದವು.

ಆಯಾಸಗೊಂಡ ದೇಹ ಮುಂದೆ ಸಾಗಲು ಹಿಂಜರಿಯುತ್ತಿದ್ದರೂ ಪ್ರಕೃತಿಯ ಸೌಂದರ್ಯವೇ ನಮ್ಮ ಹೆಜ್ಜೆಗಳಿಗೆ ಹೊಸ ಚೈತನ್ಯ ತುಂಬುತ್ತಿತ್ತು. ಇದು ಸಾಮಾನ್ಯ ಟ್ರೆಕ್ಕಿಂಗ್ ಅಲ್ಲ ಎಂಬುದು ಆಗಲೇ ಮನದಟ್ಟಾಯಿತು. ಇಲ್ಲಿಗೆ



ಬರಬೇಕಾದರೆ ದೈಹಿಕ ಸಾಮರ್ಥ್ಯದ ಜೊತೆಗೆ ಮಾನಸಿಕ ದೃಢತೆಯೂ ಅತ್ಯಗತ್ಯ.

ಜಲಪಾತಕ್ಕೆ ಇನ್ನೂ ಎರಡು ಕಿಲೋಮೀಟರ್ ಬಾಕಿಯಿದ್ದಾಗ ಚೆಕ್‌ಪೋಸ್ಟ್ ತಲುಪಿದೆವು. ಅಲ್ಲಿ ಮಾರ್ಗದರ್ಶಕರಿಲ್ಲದೆ ಯಾರಿಗೂ ಪ್ರವೇಶವಿರಲಿಲ್ಲ. ನಮ್ಮ ಮಾರ್ಗದರ್ಶಕರು ಬಂದ ನಂತರವೇ ಮುಂದಿನ ಪಯಣ ಆರಂಭವಾಯಿತು. ಅಲ್ಲಿ ಶೌಚಾಲಯ, ಕುಡಿಯುವ ನೀರು ಹಾಗೂ ಸಣ್ಣ ಕ್ಯಾಂಟೀನ್ ವ್ಯವಸ್ಥೆ ಮಾಡಲಾಗಿತ್ತು.

ಸುದೀರ್ಘ ಚಾರಣದಲ್ಲಿ ತಂಡದ ಸದಸ್ಯರು ತಮ್ಮ ತಮ್ಮ ವೇಗಕ್ಕೆ ಅನುಗುಣವಾಗಿ ಚದುರಿಕೊಂಡಿದ್ದರು. ಮಧ್ಯಾಹ್ನ ಸುಮಾರು ಮೂರು ಗಂಟೆಗೆ ಎಲ್ಲರೂ ಮತ್ತೆ ಒಂದಾಗಿ ತಂದಿದ್ದ ಊಟವನ್ನು ಸೇವಿಸಿ ಸ್ವಲ್ಪ ವಿಶ್ರಾಂತಿ ಪಡೆದೆವು. ಬಳಿಕ ವಾಚ್ ಟವರ್ ಏರಿದಾಗ ದೂರದಲ್ಲಿ ಹಾಲಿನ ಹೊಳೆಯಂತೆ ಧುಮ್ಮಿಕ್ಕುತ್ತಿದ್ದ ದೂದ್‌ಸಾಗರ ಜಲಪಾತ ಕಣ್ಣಿಗೆ ಬಿತ್ತು. ಆ ಒಂದು ದೃಶ್ಯವೇ ಬಳಲಿದ್ದ ದೇಹಕ್ಕೆ ಹೊಸ ಚೈತನ್ಯ ತುಂಬಿತು.

ಮತ್ತೆ ಅಲ್ಲಿಂದ ಜಲಪಾತದತ್ತ ಹೆಜ್ಜೆ ಹಾಕಿದೆವು. ಮುಂದಿನ ದಾರಿ ಇನ್ನಷ್ಟು ಕಠಿಣವಾಗಿತ್ತು. ಬೃಹತ್ ಕಲ್ಲುಬಂಡೆಗಳ ನಡುವೆ ಅತ್ಯಂತ ಎಚ್ಚರಿಕೆಯಿಂದ ಸಾಗಬೇಕಾಯಿತು. ಕೊನೆಗೂ ಸುಮಾರು 310 ಮೀಟರ್ (1,017 ಅಡಿ) ಎತ್ತರದಿಂದ ನಾಲ್ಕು ಹಂತಗಳಲ್ಲಿ ಧುಮ್ಮಿಕ್ಕಿ ಹರಿಯುವ ದೂದ್‌ಸಾಗರ ಜಲಪಾತ ತನ್ನ ಸಂಪೂರ್ಣ ವೈಭವದೊಂದಿಗೆ ಕಣ್ಣೆದುರು ಅನಾವರಣಗೊಂಡಿತು.

ಹಾಲಿನ ಸಾಗರದಂತೆ ಕಾಣುವ ಈ ಜಲಪಾತಕ್ಕೆ ಟಿದೂದ್‌ಸಾಗರಟಿ ಎಂಬ ಹೆಸರು ಎಷ್ಟು ಸೂಕ್ತ ಎಂಬುದು ಅಲ್ಲಿಗೆ ಹೋದಾಗಲೇ ಅರಿವಾಗುತ್ತದೆ. ಜಲಪಾತದ ಮಧ್ಯೆ ಹಾದುಹೋಗುವ ರೈಲು ಸೇತುವೆ, ನಿಧಾನವಾಗಿ ಚಲಿಸುವ ರೈಲು, ಹಚ್ಚಹಸಿರು ಬೆಟ್ಟಗಳು, ಮಂಜಿನ ಹನಿಗಳು ಮತ್ತು ಧುಮ್ಮಿಕ್ಕುವ ನೀರಿನ ರಭಸ ಇವೆಲ್ಲವೂ ಸೇರಿ ಪ್ರಕೃತಿಯ ಅದ್ಭುತ ಕಲಾಕೃತಿಯಂತೆ ಕಾಣುತ್ತಿತ್ತು. ಆ ಕ್ಷಣದಲ್ಲಿ ಕ್ಯಾಮೆರಾ ಸೆರೆಹಿಡಿದದ್ದು ಕೇವಲ ದೃಶ್ಯವಷ್ಟೇ, ಆದರೆ ಮನಸ್ಸು ಸೆರೆಹಿಡಿದದ್ದು ಜೀವಮಾನವಿಡೀ ಮರೆಯಲಾಗದ ಅನುಭವ.

ಈ ಭವ್ಯ ಜಲಪಾತವು ಮಂಡೋವಿ (ಮಹಾದಾಯಿ) ನದಿಯಿಂದ ನಿರ್ಮಾಣವಾಗಿದೆ. ಕರ್ನಾಟಕದ ಭೀಮಗಡ ವನ್ಯಜೀವಿ ಅಭಯಾರಣ್ಯದ ಪಶ್ಚಿಮ ಘಟ್ಟದಲ್ಲಿ ಉಗಮಿಸುವ ಮಹಾದಾಯಿ ನದಿ ಕರ್ನಾಟಕಗೋವಾ ಗಡಿಭಾಗದಲ್ಲಿ ಸುಮಾರು 310 ಮೀಟರ್ ಎತ್ತರದಿಂದ ನಾಲ್ಕು ಹಂತಗಳಲ್ಲಿ ಧುಮ್ಮಿಕ್ಕಿ ಈ ಅದ್ಭುತ ಜಲಪಾತವನ್ನು ಸೃಷ್ಟಿಸುತ್ತದೆ. ಅಲ್ಲಿಂದ ಮುಂದೆ ಗೋವಾದ ಮೂಲಕ ಹರಿದು ಅರಬ್ಬಿ ಸಮುದ್ರವನ್ನು ಸೇರುತ್ತದೆ. ಪ್ರಕೃತಿಯ ವೈಭವ ಮತ್ತು ಭೌಗೋಳಿಕ ವಿಶೇಷತೆಗಳ ಸಂಗಮವೇ ದೂದ್‌ಸಾಗರ.

ಆ ಸೌಂದರ್ಯವನ್ನು ಕಣ್ತುಂಬಿಕೊಂಡೆವು. ಮನತುಂಬ ಆಸ್ವಾದಿಸಿದೆವು. ಅಲ್ಲಿಂದ ಹೊರಡಲು ಮನಸ್ಸೇ ಒಪ್ಪುತ್ತಿರಲಿಲ್ಲ. ಆದರೂ ಸಂಜೆ ಸುಮಾರು 4.15ಕ್ಕೆ ಭಾರವಾದ ಮನಸ್ಸಿನಿಂದ ಹಿಂದಿರುಗುವ ಪಯಣ ಆರಂಭಿಸಿದೆವು.

ಹಿಂತಿರುಗುವ ದಾರಿ ಇನ್ನಷ್ಟು ಸವಾಲಿನಿಂದ ಕೂಡಿತ್ತು. ವಿಪರೀತ ಮಳೆ ಸುರಿಯತೊಡಗಿತು. ಹೋಗುವಾಗ ಸಣ್ಣದಾಗಿ ಹರಿಯುತ್ತಿದ್ದ ಝರಿಗಳು ಈಗ ಉಕ್ಕಿ ಹರಿಯುತ್ತಿದ್ದವು. ಕತ್ತಲು ನಿಧಾನವಾಗಿ ಆವರಿಸುತ್ತಿದ್ದಂತೆ ನಮ್ಮ ಹೆಜ್ಜೆಗಳ ವೇಗವೂ ಹೆಚ್ಚಾಯಿತು. ಆಯಾಸ, ಮಳೆ, ಜಾರುವ ಹಾದಿಎಲ್ಲವೂ ಇದ್ದರೂ ಯಾರೊಬ್ಬರೂ ಧೈರ್ಯ ಕಳೆದುಕೊಳ್ಳಲಿಲ್ಲ. ಮೊಬೈಲ್ ಟಾರ್ಚ್ ಬೆಳಕನ್ನು ಆಸರೆಯಾಗಿಸಿಕೊಂಡು, ಒಬ್ಬರಿಗೊಬ್ಬರು ಧೈರ್ಯ ತುಂಬುತ್ತಾ, ಪರಸ್ಪರ ಸಹಾಯ ಮಾಡುತ್ತಾ ಸುರಕ್ಷಿತವಾಗಿ ಆರಂಭದ ಸ್ಥಳಕ್ಕೆ ಹಿಂದಿರುಗಿದೆವು. ಆ ಕ್ಷಣದಲ್ಲಿ ನಮ್ಮ ತಂಡದ ಒಗ್ಗಟ್ಟು ಮತ್ತು ಸಹಕಾರವೇ ನಮ್ಮ ದೊಡ್ಡ ಶಕ್ತಿಯಾಗಿತ್ತು.

ನಂತರ ಅಲ್ಪೋಪಹಾರ ಸೇವಿಸಿ ಜೀಪ್ ಮೂಲಕ ಬಸ್ ತಲುಪಿದೆವು. ರಾತ್ರಿ ಸುಮಾರು 8 ಗಂಟೆಗೆ ಬಸ್‌ನಲ್ಲಿ ಪ್ರಯಾಣ ಆರಂಭವಾಯಿತು. ಎಲ್ಲರೂ ವಿಪರೀತ ಆಯಾಸಗೊಂಡಿದ್ದರೂ ಮುಖದಲ್ಲಿ ಯಶಸ್ಸಿನ ಮಂದಹಾಸವಿತ್ತು. ದಾರಿಮಧ್ಯೆ ರಾತ್ರಿ ಊಟ ಮುಗಿಸಿ ಬಸ್‌ನಲ್ಲಿ ಕುಳಿತ ಕೆಲವೇ ಕ್ಷಣಗಳಲ್ಲಿ ಎಲ್ಲರೂ ನಿದ್ರೆಯ ಮಡಿಲಿಗೆ ಜಾರಿದರು. ಮತ್ತೆ ಕಣ್ಣು ತೆರೆದಾಗ ಮಧ್ಯರಾತ್ರಿ ಸುಮಾರು 3 ಗಂಟೆಗೆ ಬೈಲಹೊಂಗಲ ತಲುಪಿದ್ದೆವು.

ಈ ಟ್ರೆಕ್ಕಿಂಗ್ ನನಗೆ ಕೇವಲ 26 ಕಿಲೋಮೀಟರ್ ಚಾರಣವಾಗಿರಲಿಲ್ಲ. ಅದು ಆತ್ಮವಿಶ್ವಾಸದ ಪರೀಕ್ಷೆಯಾಗಿತ್ತು; ತಂಡದ ಸಹಕಾರದ ಮಹತ್ವವನ್ನು ಅರಿಯುವ ಅವಕಾಶವಾಗಿತ್ತು; ಪ್ರಕೃತಿಯ ಎದುರು ಮನುಷ್ಯ ಎಷ್ಟು ಚಿಕ್ಕವನು ಎಂಬುದನ್ನು ಮನದಟ್ಟು ಮಾಡಿದ ಪಯಣವಾಗಿತ್ತು. ಪ್ರತಿಯೊಂದು ಹೆಜ್ಜೆಯೂ ತಾಳ್ಮೆ ಕಲಿಸಿತು. ಪ್ರತಿಯೊಂದು ಬೆಟ್ಟವೂ ಧೈರ್ಯ ತುಂಬಿತು. ಪ್ರತಿಯೊಂದು ಝರಿಯೂ ಬದುಕಿಗೆ ಹೊಸ ಚೈತನ್ಯ ನೀಡಿತು.

ಈ ಚಾರಣ ಪ್ರಕೃತಿಯ ಮೇಲಿನ ನನ್ನ ಪ್ರೀತಿಯನ್ನು ಮತ್ತಷ್ಟು ಗಟ್ಟಿಗೊಳಿಸಿತು. ಪ್ರಕೃತಿಯ ಸೌಂದರ್ಯವನ್ನು ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿ ಎಂಬ ಅರಿವನ್ನೂ ಮೂಡಿಸಿತು. ಜೀವನದಲ್ಲಿ ಗುರಿ ಎಷ್ಟೇ ಕಠಿಣವಾಗಿದ್ದರೂ ದೃಢಸಂಕಲ್ಪ, ಪರಿಶ್ರಮ ಮತ್ತು ಪರಸ್ಪರ ಸಹಕಾರ ಇದ್ದರೆ ಅದನ್ನು ಸಾಧಿಸಬಹುದು ಎಂಬ ಅಮೂಲ್ಯ ಪಾಠವನ್ನು ಈ ಪಯಣ ಕಲಿಸಿತು.

ಒಟ್ಟಾರೆಯಾಗಿ, ದೂದ್‌ಸಾಗರ ಟ್ರೆಕ್ಕಿಂಗ್ ನನ್ನ ಜೀವನದ ಅತ್ಯಂತ ಅಮೂಲ್ಯ ಅನುಭವಗಳಲ್ಲಿ ಒಂದಾಗಿದೆ. ಬೆಟ್ಟಗಳು, ಕಾಡುಗಳು, ಜಲಪಾತಗಳು, ಮಳೆಯ ಹನಿಗಳು, ಸ್ನೇಹಿತರು, ಸಹೋದ್ಯೋಗಿಗಳು ಹಾಗೂ ನನ್ನ ಜೀವನ ಸಂಗಾತಿಯೊಂದಿಗೆ ಕಳೆದ ಆ ಕ್ಷಣಗಳು ಎಂದೆಂದಿಗೂ ಹಸಿರಾಗಿಯೇ ಉಳಿಯಲಿವೆ.

ನಿಜಕ್ಕೂ, ಪ್ರಕೃತಿಯ ಮಡಿಲಲ್ಲಿ ಕಳೆದ ಒಂದು ದಿನ ಸಾವಿರ ದಿನಗಳ ಸಂತೋಷವನ್ನು ನೀಡುತ್ತದೆ ಎಂಬ ಮಾತಿನ ಸತ್ಯವನ್ನು ನಾನು ಈ ಚಾರಣದಲ್ಲಿ ಮನಸಾರೆ ಅನುಭವಿಸಿದೆ.

**-ಮಲ್ಲಿಕಾರ್ಜುನ ಕೆ.,** ಶಿಕ್ಷಕರು, ಕಲ್ಪವೃಕ್ಷ ಮಾದರಿ ಶಾಲೆ, ಬೈಲಹೊಂಗಲ

# ಸ್ತ್ರೀ ಸಂವೇದನೆಯ ಶಕ್ತಿ: ಡಾ. ನಾಗಲಕ್ಷ್ಮಿ ಚೌದರಿ

ಮನೆ ಮನೆಗಳಲ್ಲಿ ದೀಪ ಬೆಳಗಿದಾಕೆ, ನಿನಗೆ ಬೇರೆ ಹೆಸರು ಬೇಕೆ... ಸ್ತ್ರೀ ಎಂದರೆ ಅಷ್ಟೇ ಸಾಕೆ... ಎಂಬ ಕವಿವಾಣಿಯು ಮಹಿಳೆಯ ಶಕ್ತಿ, ತ್ಯಾಗ ಮತ್ತು ಸಂವೇದನೆಯ ಪ್ರತೀಕವಾಗಿದೆ. ಈ ಸಾಲುಗಳನ್ನು ನೆನಪಿಸಿಕೊಂಡಾಗ ಸಹಜವಾಗಿಯೇ ಮನಸ್ಸಿಗೆ ಬರುವ ವ್ಯಕ್ತಿತ್ವವೆಂದರೆ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌದರಿ.



ಇಂದಿನ ಆಧುನಿಕ ಸಮಾಜದಲ್ಲಿಯೂ ಮಹಿಳೆಯರು ಅನೇಕ ಸಾಮಾಜಿಕ, ಆರ್ಥಿಕ ಹಾಗೂ ಮಾನಸಿಕ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಶಿಕ್ಷಣ, ಉದ್ಯೋಗ ಮತ್ತು ಸಾರ್ವಜನಿಕ ಜೀವನದಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆ ಹೆಚ್ಚಾದರೂ, ದೌರ್ಜನ್ಯ, ಕಿರುಕುಳ, ಶೋಷಣೆ ಮತ್ತು ಅಸಮಾನತೆ ಇನ್ನೂ ಸಂಪೂರ್ಣವಾಗಿ ನಿವಾರಣೆಯಾಗಿಲ್ಲ. ಇಂತಹ ಸಂದರ್ಭದಲ್ಲಿ ಮಹಿಳೆಯರ ಧ್ವನಿಯಾಗಿ, ಅವರ ಹಕ್ಕುಗಳ ರಕ್ಷಕಿಯಾಗಿ ಡಾ. ನಾಗಲಕ್ಷ್ಮಿ ಚೌದರಿ ಅವರು ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಮಹಿಳಾ ಆಯೋಗದ ಕಾರ್ಯವು ಕೇವಲ ದೂರುಗಳನ್ನು ಸ್ವೀಕರಿಸುವುದಕ್ಕೆ ಸೀಮಿತವಾಗಿಲ್ಲ. ಕೌಟುಂಬಿಕ ಹಿಂಸೆ, ಲೈಂಗಿಕ ಕಿರುಕುಳ, ಆರ್ಥಿಕ ಶೋಷಣೆ, ಸಾಮಾಜಿಕ ಅನ್ಯಾಯ ಹಾಗೂ ಮಹಿಳೆಯರ ಮೇಲಿನ ವಿವಿಧ ರೀತಿಯ ದೌರ್ಜನ್ಯಗಳಿಗೆ ಸ್ಪಂದಿಸಿ, ಕಾನೂನುಬದ್ಧ ಹಾಗೂ ಮಾನವೀಯ ನೆಲೆಯಲ್ಲಿ ಪರಿಹಾರ ಕಲ್ಪಿಸುವ ಜವಾಬ್ದಾರಿಯನ್ನು ಆಯೋಗ ಯಶಸ್ವಿಯಾಗಿ ನಿರ್ವಹಿಸುತ್ತಿದೆ. ಈ ಕಾರ್ಯದಲ್ಲಿ ಡಾ. ನಾಗಲಕ್ಷ್ಮಿ ಚೌದರಿ ಅವರ ಸಂವೇದನಾಶೀಲತೆ ವಿಶೇಷವಾಗಿ ಗಮನ ಸೆಳೆಯುತ್ತದೆ.

ಅವರು ಮಹಿಳೆಯರ ಸಮಸ್ಯೆಗಳನ್ನು ಕೇವಲ ಕಡತಗಳಾಗಿ ನೋಡುವುದಿಲ್ಲ. ನೋವಿನ ಹಿಂದಿರುವ ಬದುಕನ್ನು ಅರ್ಥಮಾಡಿಕೊಂಡು ಸ್ಪಂದಿಸುವ ಮಾನವೀಯ ಗುಣವೇ ಅವರ ನಾಯಕತ್ವದ ದೊಡ್ಡ ಶಕ್ತಿಯಾಗಿದೆ.

ನೊಂದ ಮಹಿಳೆಯರಿಗೆ ಧೈರ್ಯ ತುಂಬುವುದು, ತುರ್ತು ನೆರವು ಕಲ್ಪಿಸುವುದು ಹಾಗೂ ನ್ಯಾಯ ದೊರಕಿಸಲು ಶ್ರಮಿಸುವುದು ಅವರ ಕಾರ್ಯವೈಖರಿಯ ಪ್ರಮುಖ ಅಂಶವಾಗಿದೆ.

ಗ್ರಾಮೀಣ ಮಹಿಳೆಯರು, ಕಾರ್ಮಿಕ ಮಹಿಳೆಯರು, ವಿದ್ಯಾರ್ಥಿನಿಯರು ಹಾಗೂ ವಿವಿಧ ಸಾಮಾಜಿಕ ವರ್ಗಗಳ ಮಹಿಳೆಯರೊಂದಿಗೆ ನೇರ ಸಂವಾದ ನಡೆಸುವ ಮೂಲಕ ಅವರ ನೈಜ ಸಮಸ್ಯೆಗಳನ್ನು ಅರಿಯುವ ಪ್ರಯತ್ನ ಅವರು ನಿರಂತರವಾಗಿ ನಡೆಸುತ್ತಿದ್ದಾರೆ. ಮಹಿಳಾ ಸಬಲೀಕರಣಕ್ಕೆ ಸರ್ಕಾರದ ವಿವಿಧ ಯೋಜನೆಗಳು ಫಲಾನುಭವಿಗಳಿಗೆ ತಲುಪುವಂತೆ ಮಾಡುವಲ್ಲಿಯೂ ಅವರು ವಿಶೇಷ ಆಸಕ್ತಿ ತೋರಿದ್ದಾರೆ.

ಇಂದಿನ ಡಿಜಿಟಲ್ ಯುಗದಲ್ಲಿ ಸೈಬರ್ ಅಪರಾಧ, ಆನ್‌ಲೈನ್ ಕಿರುಕುಳ ಹಾಗೂ ಸಾಮಾಜಿಕ ಜಾಲತಾಣಗಳ ದುರುಪಯೋಗ ಮಹಿಳೆಯರಿಗೆ ಹೊಸ ಸವಾಲುಗಳಾಗಿವೆ. ಈ ಹಿನ್ನೆಲೆಯಲ್ಲಿ ಮಹಿಳೆಯರಲ್ಲಿ ಕಾನೂನು ಅರಿವು, ಡಿಜಿಟಲ್ ಸುರಕ್ಷತೆ ಮತ್ತು ಆತ್ಮವಿಶ್ವಾಸ ಬೆಳೆಸುವ ಜಾಗೃತಿ ಕಾರ್ಯಕ್ರಮಗಳಿಗೆ ಮಹಿಳಾ ಆಯೋಗ ಆದ್ಯತೆ ನೀಡುತ್ತಿರುವುದು ಕಾಲದ ಅಗತ್ಯವಾಗಿದೆ.

ಮಹಿಳಾ ಸಬಲೀಕರಣವೆಂದರೆ ಕೇವಲ ಅವಕಾಶ ಕಲ್ಪಿಸುವುದಲ್ಲ; ಅವರ ಸಾಮರ್ಥ್ಯವನ್ನು ಗುರುತಿಸಿ ನಾಯಕತ್ವದ ಸ್ಥಾನಕ್ಕೆ ತರುವುದು. ಮಹಿಳೆಯರ ಶಿಕ್ಷಣ, ಆರೋಗ್ಯ, ಉದ್ಯೋಗ, ಸ್ವಾಭಿಮಾನ ಮತ್ತು ಸುರಕ್ಷತೆಗೆ ನೀಡುವ ಆದ್ಯತೆಯೇ ಸಮಾಜದ ಭವಿಷ್ಯವನ್ನು ರೂಪಿಸುತ್ತದೆ. ಮಹಿಳೆಯರ ಸ್ಥಾನಮಾನ ಬಲಗೊಂಡಷ್ಟೂ ಕುಟುಂಬ, ಸಮಾಜ ಮತ್ತು ರಾಷ್ಟ್ರದ ಪ್ರಗತಿಯೂ ದೃಢವಾಗುತ್ತದೆ.

ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ ಎಂಬ ಮಾತಿನಂತೆ, ನಕಾರಾತ್ಮಕ ಟೀಕೆಗಳಿಗೆ ಮಣಿಯದೆ ಸಮಾಜಮುಖಿ ಕಾರ್ಯಗಳ ಮೂಲಕ ಜನಮನದಲ್ಲಿ ಸ್ಥಾನ ಪಡೆದಿರುವ ನಾಯಕತ್ವ ಡಾ. ನಾಗಲಕ್ಷ್ಮಿ ಚೌದರಿಯವರದು. ಅವರ ಕ್ರಿಯಾಶೀಲತೆ, ಬದ್ಧತೆ ಹಾಗೂ ಮಾತೃ ಹೃದಯ ಮಹಿಳೆಯರಲ್ಲಿ ಹೊಸ ಆಶಾಭಾವನೆ ಮೂಡಿಸಿದೆ.

ಜುಲೈ 31 ಮತ್ತು ಆಗಸ್ಟ್ 1ರಂದು ಗದಗ ಜಿಲ್ಲೆಗೆ ಅವರು ಆಗಮಿಸಿದ್ದು ಜಿಲ್ಲೆಯ ಮಹಿಳೆಯರಿಗೆ ಮತ್ತಷ್ಟು ಆತ್ಮವಿಶ್ವಾಸ ತುಂಬುವ ಸಂದರ್ಭವಾಗಿದೆ. ಗದಗ ಜಿಲ್ಲೆಯ ಸಮಸ್ತ ಮಹಿಳಾ ಬಳಗದ ಪರವಾಗಿ ಅವರಿಗೆ ಆತ್ಮೀಯ ಸ್ವಾಗತ ಹಾಗೂ ಹೃತ್ಪೂರ್ವಕ ಅಭಿನಂದನೆಗಳು.



**- ಶ್ರೀಮತಿ ಸುಧಾ ಶರಣರೆಡ್ಡಿ ಹುಚ್ಚಣ್ಣವರ**
ಜಿಲ್ಲಾಧ್ಯಕ್ಷರು, ಗದಗ ಜಿಲ್ಲಾ ಕದಳಿ ಮಹಿಳಾ ವೇದಿಕೆ

### ವಿಶ್ವ ಮಾನವ ಕಳ್ಳಸಾಗಾಣಿಕೆ ವಿರೋಧಿ ದಿನಾಚರಣೆ ಅಂಗವಾಗಿ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿ ತರಬೇತಿ

# ಮಕ್ಕಳ ಕಳ್ಳಸಾಗಾಣಿಕೆ ತಡೆಗೆ ಜಾಗೃತಿ ಅತ್ಯಗತ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳನ್ನು ಮಾರಾಟ ಮಾಡುವುದು, ಭಿಕ್ಷಾಟನೆ, ಮಾದಕ ವಸ್ತುಗಳ ಸಾಗಾಣಿಕೆ ಹಾಗೂ ಇತರ ಅಕ್ರಮ ಚಟುವಟಿಕೆಗಳಿಗೆ ಬಳಸುವುದು ಗಂಭೀರ ಅಪರಾಧವಾಗಿದ್ದು, ಇಂತಹ ಪ್ರಕರಣಗಳನ್ನು ತಡೆಗಟ್ಟಲು ಅಧಿಕಾರಿಗಳು ಹೆಚ್ಚಿನ ಜಾಗೃತಿ ಹಾಗೂ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಂಯುಕ್ತಾಶ್ರಯದಲ್ಲಿ ಗುರುವಾರ ಆಯೋಜಿಸಿದ್ದ ಟಿವಿಶ್ವ ಮಾನವ ಕಳ್ಳಸಾಗಾಣಿಕೆ ವಿರೋಧ ದಿನಾಚರಣೆ2026ಟಿ ಅಂಗವಾಗಿ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ ನಡೆದ ಸಾಮರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಾಲೆ ಬಿಟ್ಟ ಮಕ್ಕಳೇ ಹೆಚ್ಚಾಗಿ ಕಳ್ಳಸಾಗಾಣಿಕೆ ಜಾಲಕ್ಕೆ ಬಲಿಯಾಗುತ್ತಿರುವುದರಿಂದ ಪ್ರತಿಯೊಂದು ಮಗುವನ್ನು ಶಾಲೆಗೆ ಮರುದಾಖಲಾತಿ ಮಾಡುವ ಕಾರ್ಯಕ್ಕೆ ಆದ್ಯತೆ ನೀಡಬೇಕು. ಉಚಿತ ಮತ್ತು ಕಡ್ಡಾಯ ಶಿಕ್ಷಣದ ಸೌಲಭ್ಯವನ್ನು ಸಮರ್ಪಕವಾಗಿ ಬಳಸಿಕೊಂಡು ಮಕ್ಕಳನ್ನು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.



ಮಕ್ಕಳನ್ನು ಭಿಕ್ಷಾಟನೆ, ಮಾದಕ ವಸ್ತುಗಳ ಸಾಗಾಣಿಕೆ ಹಾಗೂ ಇತರ ದುಷ್ಕೃತ್ಯಗಳಿಗೆ ಬಳಸುವುದು ಮಾನವ ಕಳ್ಳಸಾಗಾಣಿಕೆಯ ವ್ಯಾಪ್ತಿಗೆ ಬರುತ್ತದೆ. ಇಂತಹ ಪ್ರಕರಣಗಳ ಬಗ್ಗೆ ಸಮಗ್ರ ತನಿಖೆ ನಡೆಸಿ ಕಾನೂನು ಕ್ರಮ ಜರುಗಿಸಬೇಕು. ಪೋಕ್ಸೊ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆ ಕುರಿತು ಅಧಿಕಾರಿಗಳು ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದರು.

ಜಿಲ್ಲಾ ಉಪ ಪೊಲೀಸ್ ವರಿಷ್ಠಾಧಿಕಾರಿ ಮುರ್ತುಜಾ ಖಾದ್ರಿ, ಮಾತನಾಡಿ, ಸೈಬರ್ ಅಪರಾಧಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಮಕ್ಕಳು ಮತ್ತು ವಿದ್ಯಾರ್ಥಿಗಳು ಅಪರಿಚಿತರ ಸಂಪರ್ಕದಿಂದ ದೂರವಿರಬೇಕು. ಯಾವುದೇ ಅನುಮಾನಾಸ್ಪದ ಘಟನೆ ಕಂಡುಬಂದರೆ ತಕ್ಷಣ ಪೊಲೀಸ್ ಇಲಾಖೆ ಹಾಗೂ ಟಿಅಕ್ಕಾ ಪಡೆಟಿಯ ನೆರವು ಪಡೆಯುವಂತೆ ಕರೆ ನೀಡಿದರು.

ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಜಯದೇವಿ ಕವಲೂರು ಮಾತನಾಡಿ, ಮಕ್ಕಳ ಕಲ್ಯಾಣ ಸಮಿತಿಯ ಕಾರ್ಯವೈಖರಿ ಹಾಗೂ ಮಕ್ಕಳ ಹಕ್ಕುಗಳ ಬಗ್ಗೆ ಮಾಹಿತಿ ನೀಡಿ, ಸಮಿತಿಯ ಸೇವೆಗಳನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಜಿ. ಮಣ್ಣೂರು ಮಾತನಾಡಿ, 1098 (ಚೈಲ್ಡ್ ಹೆಲ್ಪ್‌ಲೈನ್ ), 112 (ತುರ್ತು ಸೇವೆ) ಹಾಗೂ 181 (ಮಹಿಳಾ ಸಹಾಯವಾಣಿ) ಉಚಿತ ಸೇವೆಗಳ ಬಗ್ಗೆ ಅರಿವು ಮೂಡಿಸಿ, ಯಾವುದೇ ಸಮಸ್ಯೆ ಎದುರಾದಾಗ ಸಾರ್ವಜನಿಕರು ಈ ಸಹಾಯವಾಣಿ ಸಂಖ್ಯೆಗಳ ಸದುಪಯೋಗ ಮಾಡಿಕೊಳ್ಳುವಂತೆ ತಿಳಿಸಿದರು.

ಜೀವನದಲ್ಲಿ ಸ್ಪಷ್ಟ ಗುರಿ ಇಟ್ಟುಕೊಂಡು ಸರಿಯಾದ ದಾರಿಯಲ್ಲಿ ಸಾಗಿದರೆ ಯಶಸ್ಸು ಸಾಧಿಸಲು ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಮಹಿಳಾ ಪೊಲೀಸ್ ಠಾಣೆಯ ವೃತ್ತ ಪೊಲೀಸ್ ನಿರೀಕ್ಷಕ ಎಲ್.ಕೆ. ಜೂಲಕಟ್ಟಿ ಅವರು ವಿಶ್ವ ಮಾನವ ಕಳ್ಳಸಾಗಾಣಿಕೆ ತಡೆ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ, ತೋಂಟದ ಸಿದ್ಧೇಶ್ವರ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎಸ್.ಎಸ್ . ಪಟ್ಟಣಶೆಟ್ಟರ, ಪ್ರಾಂಶುಪಾಲ ವೈ.ಎಸ್ . ಮತ್ತೂರು, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಯಶ್ರೀ ಆರ್., ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಯಶ್ರೀ ಆರ್. ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಲ್ಲಪ್ಪ ಹೊಸಳ್ಳಿ ಕಾರ್ಯಕ್ರಮ ನಿರೂಪಿಸಿದರು. ರಮೇಶ ಕಳ್ಳಿಮನಿ ವಂದಿಸಿದರು.

**ಶಾಲೆಯಿಂದ ಹೊರಗುಳಿದ ಮಕ್ಕಳು ಮಾನವ ಕಳ್ಳಸಾಗಾಣಿಕೆ ಜಾಲಕ್ಕೆ ಬಲಿಯಾಗುವ ಸಾಧ್ಯತೆ ಹೆಚ್ಚು. ಪ್ರತಿಯೊಂದು ಮಗುವನ್ನು ಶಿಕ್ಷಣದ ಮುಖ್ಯವಾಹಿನಿಗೆ ತರುವುದು ಪ್ರತಿಯೊಬ್ಬ ಅಧಿಕಾರಿಯ ಜವಾಬ್ದಾರಿಯಾಗಿದೆ.**

**- ಸಿ.ಎಸ್. ಶಿವನಗೌಡ್ರ,** ಸದಸ್ಯ ಕಾರ್ಯದರ್ಶಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ

# ಗುರುಪೂರ್ಣಿಮೆ: ದೇವರ ದಾಸಿಮಯ್ಯನವರ ವಚನ ವಾಚನ

**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಹರ ಮುನಿದರೂ ಗುರು ಕಾಯುವ ಎಂಬ ನುಡಿಯಂತೆ ಜ್ಞಾನ, ಸಂಸ್ಕಾರ ಮತ್ತು ಸನ್ಮಾರ್ಗದ ಬದುಕಿಗೆ ಗುರುವಿನ ಮಾರ್ಗದರ್ಶನ ಅತ್ಯಗತ್ಯ. ಗುರುಪೂರ್ಣಿಮೆ ದಿನವು ಗುರುವಿನ ಮಹತ್ವವನ್ನು ಸ್ಮರಿಸಿ ಅವರ ಆಶೀರ್ವಾದ ಪಡೆಯುವ ಪವಿತ್ರ ದಿನವಾಗಿದೆ ಎಂದು ಅಶೋಕ್ ಬಣ್ಣದ ಹೇಳಿದರು.

ಗುರುಪೂರ್ಣಿಮೆ ಅಂಗವಾಗಿ ಬೆಟಗೇರಿಯ ಪಾಲಾ-ಬದಾಮಿ ರಸ್ತೆಯ ಸಮೀಪದ ಆದ್ಯ ವಚನಕಾರ ಶ್ರೀ ದೇವರ ದಾಸಿಮಯ್ಯನವರ ಪುತ್ಥಳಿ ಎದುರು ನಡೆದ ಗುರುಪೂಜೆ ಹಾಗೂ 34ನೇ ಮಾಸಿಕ ವಚನ ವಾಚನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಅಶೋಕ್ ಬಣ್ಣದ ಅವರು ದೇವರ ದಾಸಿಮಯ್ಯನವರ ಪುತ್ಥಳಿಗೆ ಪೂಜೆ ಸಲ್ಲಿಸಿದರು. ಬಳಿಕ ಸಾಹಿತಿಗಳಾದ ರಾಮಚಂದ್ರ ಹುಬ್ಬಳ್ಳಿ ಹಾಗೂ ದೊಡ್ಡಪ್ಪ ಮೂಲಿಮನಿ ಅವರು ಗುರು ಕರುಣಿಸಲು, ಸಂಸಾರ ವಿಷಯ ಕೆಟ್ಟಿತ್ತು... ನೆಟ್ಟಗೆ ಗುರುಪಾದವ ಮುಟ್ಟಿ ಭವಗೆಟ್ಟೆನು ಕಾಣಾ! ರಾಮನಾಥ ಎಂಬ ವಚನವನ್ನು ವಾಚಿಸಿ, ಅದರ ತಾತ್ಪರ್ಯವನ್ನು ವಿವರಿಸಿದರು.



ಶ್ರೀನಿವಾಸ್ ಹುಬ್ಬಳ್ಳಿ ಮಾತನಾಡಿ, ಕಳೆದ 34 ತಿಂಗಳುಗಳಿಂದ ನಿರಂತರವಾಗಿ ವಚನ ವಾಚನ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಲು ಸಮಾಜದ ಬಂಧುಗಳ ಸಹಕಾರವೇ ಪ್ರಮುಖ ಕಾರಣವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಾಹಿತಿಗಳಾದ ಶಂಕ್ರಪ್ಪ ಗಂಜಿ, ಶಂಕ್ರಪ್ಪ ತೊಂಡಿಹಾಳ, ಆನಂದ ಶಾವಿ, ನಗರಸಭೆ ಸದಸ್ಯ ಮಾಧುಸಾ ಮೆಹರವಾಡೆ, ಮಾಜಿ ಸದಸ್ಯ ದಶರಥರಾಜ ಕೊಳ್ಳಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಈ ವೇಳೆ ದೇವರ ದಾಸಿಮಯ್ಯನವರ ಪುತ್ಥಳಿ ಎದುರು ನಿರ್ಮಾಣವಾಗುತ್ತಿರುವ ನೂತನ ವೇದಿಕೆ ಕಾಮಗಾರಿಗೆ ನಗರಸಭೆ ಸದಸ್ಯ ರಾಘವೇಂದ್ರ ಯಳವತ್ತಿ ನೀಡುತ್ತಿರುವ ಸಹಕಾರವನ್ನು ದಶರಥರಾಜ ಕೊಳ್ಳಿ ಶ್ಲಾಘಿಸಿದರು. ಸೀತಾರಾಮ ದುತ್ತರಗಿ ವಂದಿಸಿದರು.

## ಸಂಕ್ಷಿಪ್ತ ಸುದ್ದಿಗಳು

# ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಕಾರ್ಯನಿರ್ವಹಿಸದೆ ಸ್ಥಗಿತಗೊಂಡಿರುವ ಗದಗ ತಾಲೂಕಿನ ಮೂರು ಸಹಕಾರ ಸಂಘಗಳ ನೋಂದಣಿ ರದ್ದುಗೊಳಿಸುವ ಪ್ರಕ್ರಿಯೆಯನ್ನು ಸಹಕಾರ ಇಲಾಖೆ ಆರಂಭಿಸಿದೆ. ಈ ಹಿನ್ನೆಲೆಯಲ್ಲಿ ಸಂಘಗಳಿಗೆ ಸಂಬಂಧಿಸಿದ ಯಾವುದೇ ಹಣಕಾಸು ವ್ಯವಹಾರ ಅಥವಾ ಆಕ್ಷೇಪಣೆಗಳಿದ್ದರೆ ಪ್ರಕಟಣೆ ಹೊರಡಿಸಿದ ದಿನಾಂಕದಿಂದ ಏಳು ದಿನಗಳೊಳಗೆ ದಾಖಲೆ ಸಮೇತ ಸಲ್ಲಿಸುವಂತೆ ಸಮಾಪನಾಧಿಕಾರಿ ತಿಳಿಸಿದ್ದಾರೆ.

ತಮ್ಮ ಬೈಲಾದಲ್ಲಿನ ಉದ್ದೇಶಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸದೆ ದೀರ್ಘಕಾಲದಿಂದ ಸ್ಥಗಿತಗೊಂಡಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಕ್ರೆಡಿಟ್ ಸೊಸೈಟಿ, ಗದಗ, ಬನಶಂಕರಿ ಮಹಿಳಾ ವಿವಿಧೋದ್ದೇಶಗಳ ಸಹಕಾರ ಸಂಘ, ಬೆಟಗೇರಿ ಹಾಗೂ ಜನತಾ ವಿದ್ಯಾವರ್ಧಕ ಬಿ.ಎಚ್ . ಪಾಟೀಲ ಸಂಯುಕ್ತ ಪದವಿ ಪೂರ್ವ ಕಾಲೇಜು ನೌಕರರ ಪತ್ತಿನ ಸಹಕಾರ ಸಂಘ, ಲಕ್ಕುಂಡಿಗಳನ್ನು ಸಮಾಪನೆಗೊಳಿಸಿ, ಸಹಕಾರ ಸಂಘಗಳ ಉಪನಿಬಂಧಕರು ಸಮಾಪನಾ ಆದೇಶ ಹೊರಡಿಸಿ ಸಮಾಪನಾಧಿಕಾರಿಯನ್ನು ನೇಮಿಸಿದ್ದಾರೆ.

ಸಮಾಪನೆಗೊಂಡಿರುವ ಸಂಘಗಳು ನೋಂದಾಯಿತ ವಿಳಾಸಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅಲ್ಲದೆ, ಆಡಳಿತ ಮಂಡಳಿ ಸದಸ್ಯರು ಹಾಗೂ ಮುಖ್ಯ ಕಾರ್ಯನಿರ್ವಾಹಕರ ಮಾಹಿತಿ ಲಭ್ಯವಿಲ್ಲದ ಕಾರಣ, ಈ ಸಂಘಗಳಿಗೆ ಯಾರಿಗಾದರೂ ಹಣ ಪಡೆಯಬೇಕಿದ್ದರೆ ಅಥವಾ ಸಂಘಕ್ಕೆ ಹಣ ನೀಡಬೇಕಿದ್ದರೆ, ಸಂಬಂಧಿತ ದಾಖಲೆಗಳೊಂದಿಗೆ ಗದಗ ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಚೇರಿಯಲ್ಲಿರುವ ಸಹಕಾರ ಸಂಘಗಳ ನಿರೀಕ್ಷಕರನ್ನು ಸಂಪರ್ಕಿಸುವಂತೆ ಸೂಚಿಸಲಾಗಿದೆ.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ, ನಿಯಮಾನುಸಾರ ಸಂಘಗಳ ಅಥಾವೆಯನ್ನು ಶೂನ್ಯಗೊಳಿಸಿ ನೋಂದಣಿ ರದ್ದುಗೊಳಿಸುವ ಕ್ರಮ ಕೈಗೊಳ್ಳಲಾಗುವುದು. ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಸಮಾಪನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರೋತ್ಸಾಹಧನ, ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಕ್ರೀಡಾ ಕಲ್ಯಾಣ ಯೋಜನೆಯಡಿ ಅಂತರರಾಷ್ಟ್ರೀಯ, ರಾಷ್ಟ್ರೀಯ ಹಾಗೂ ರಾಜ್ಯಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ಗೆದ್ದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಇದರೊಂದಿಗೆ 2025-26ನೇ ಸಾಲಿನ ಕ್ರೀಡಾ ವಿದ್ಯಾರ್ಥಿ ವೇತನ ಹಾಗೂ 2026-27ನೇ ಸಾಲಿನ ಶೈಕ್ಷಣಿಕ ಶುಲ್ಕ ಮರುಪಾವತಿ ಸೌಲಭ್ಯಕ್ಕೂ ಅರ್ಹ ಕ್ರೀಡಾಪಟುಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ. ಆಸಕ್ತ ಕ್ರೀಡಾಪಟುಗಳು ಆಗಸ್ಟ್ 31ರೊಳಗೆ ಸೇವಾ ಸಿಂಧು ಪೋರ್ಟಲ್ ಮೂಲಕ ಕಡ್ಡಾಯವಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಕೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಯುವ ಸಹಾಯವಾಣಿ 155265 ಸಂಖ್ಯೆಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಹಿರಿಯ ನಾಗರಿಕರು ಹಾಗೂ ಹಿರಿಯ ನಾಗರಿಕರ ಕಲ್ಯಾಣ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿರುವ ಸಂಸ್ಥೆಗಳಿಂದ ರಾಜ್ಯ ಮಟ್ಟದ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅಕ್ಟೋಬರ್ 1ರಂದು ರಾಜ್ಯಮಟ್ಟದಲ್ಲಿ ನಡೆಯಲಿರುವ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯಲ್ಲಿ ಶಿಕ್ಷಣ, ಸಾಹಿತ್ಯ, ಕಲೆ, ಕಾನೂನು, ಕ್ರೀಡೆ ಹಾಗೂ ಸಮಾಜಸೇವೆ ಕ್ಷೇತ್ರಗಳಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಹಿರಿಯ ನಾಗರಿಕರಿಗೆ ಆರು ವೈಯಕ್ತಿಕ ಪ್ರಶಸ್ತಿಗಳು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸಿದ ಒಂದು ಸಂಸ್ಥೆಗೆ ಪ್ರಶಸ್ತಿ ಸೇರಿದಂತೆ ಒಟ್ಟು ಏಳು ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು.

ಜಿಲ್ಲೆಯ ಅರ್ಹ ಹಿರಿಯ ನಾಗರಿಕರು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸಂಸ್ಥೆಗಳು ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಆಗಸ್ಟ್ 17ರೊಳಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಚೇರಿಗೆ ಸಲ್ಲಿಸಬೇಕು.

ಅರ್ಜಿ ನಮೂನೆ ಇಲಾಖೆಯ ಕಚೇರಿಯಲ್ಲಿ ಲಭ್ಯವಿದ್ದು, ನಿಗದಿತ ಅವಧಿಯ ನಂತರ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ 08372-220419 ದೂರವಾಣಿ ಸಂಖ್ಯೆಯನ್ನು ಅಥವಾ ಗದಗದ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದು.

# ಹಡಪದ ಅಪ್ಪಣ್ಣನವರ ಬದುಕು ಸಮಾನತೆಯ ದಾರಿದೀಪ

**ವಿಜಯಸಾಕ್ಷಿ ಸುದ್ದಿ, ಡಂಬಳ**

ಸಮಾನತೆ, ಮಾನವೀಯತೆ ಹಾಗೂ ಕಾಯಕದ ಸಂದೇಶವನ್ನು ಸಮಾಜಕ್ಕೆ ಸಾರಿದ 12ನೇ ಶತಮಾನದ ಮಹಾನ್ ಶಿವಶರಣ ಹಡಪದ ಅಪ್ಪಣ್ಣನವರ ಆದರ್ಶ ಜೀವನ ಇಂದಿನ ಸಮಾಜಕ್ಕೂ ದಾರಿದೀಪವಾಗಿದ್ದು, ಅವರ ತತ್ವ-ಸಿದ್ಧಾಂತಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಉಪತಹಶೀಲ್ದಾರ ಎಸ್ .ಎಸ್ . ಬಿಚ್ಚಾಲಿ ಹೇಳಿದರು.

ಡಂಬಳದ ಉಪ ತಹಸೀಲ್ದಾರ್ ಕಚೇರಿಯಲ್ಲಿ ಆಯೋಜಿಸಿದ್ದ ನಿಜಸುಖಿ ಶರಣ ಹಡಪದ ಅಪ್ಪಣ್ಣನವರ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.

ಹಡಪದ ಅಪ್ಪಣ್ಣನವರ ವಚನಗಳ ಬೆಳಕು ಎಂದಿಗೂ ಆರದು. ಸಾಮಾನ್ಯ ವ್ಯಕ್ತಿಯ ಜನ್ಮದಿನಕ್ಕೂ ಮಹಾತ್ಮರ ಜಯಂತಿಗೂ ಬಹಳ ವ್ಯತ್ಯಾಸವಿದೆ. ಅಪ್ಪಣ್ಣನವರು ಕೇವಲ ಕೇಶ ಕತ್ತರಿಸುವ ಕಾಯಕ ಮಾಡಲಿಲ್ಲ, ಮನುಷ್ಯನ ಮನಸ್ಸಿನಲ್ಲಿರುವ ಅಹಂಕಾರ, ಕ್ಲೇಶ ಮತ್ತು ವಿಕಾರಗಳನ್ನು ತೊಡೆದುಹಾಕುವ ಸಂದೇಶವನ್ನು ತಮ್ಮ ಬದುಕಿನ ಮೂಲಕ ಸಾರಿದರು ಎಂದು ಹೇಳಿದರು.

ಕಂದಾಯ ಅಧಿಕಾರಿ ಪ್ರಭು ಬಾಗಲಿ ಮಾತನಾಡಿ, ಅನುಭವ ಮಂಟಪದ ಕಾರ್ಯದರ್ಶಿಯಾಗಿ ಬಸವಣ್ಣನವರ ಆಪ್ತ ಸಹಚರರಾಗಿದ್ದ ಹಡಪದ ಅಪ್ಪಣ್ಣನವರು ಸಮಾಜದಲ್ಲಿ ಸಮಾನತೆ, ಸೌಹಾರ್ದತೆ ಹಾಗೂ ಮಾನವೀಯ ಮೌಲ್ಯಗಳನ್ನು ಬಿತ್ತುವಲ್ಲಿ ಮಹತ್ತರ ಪಾತ್ರ ವಹಿಸಿದ್ದಾರೆ ಎಂದು ತಿಳಿಸಿದರು.

ಅಶೋಕ ಹಡಪದ ಮಾತನಾಡಿ, ಬಸವಣ್ಣನವರು ಜಾತಿ-ಪಂಗಡಗಳ ಭೇದಭಾವವನ್ನು ತಿರಸ್ಕರಿಸಿ ಹಡಪದ ಅಪ್ಪಣ್ಣನವರನ್ನು ತಮ್ಮ ಆಪ್ತ ಕಾರ್ಯದರ್ಶಿಯಾಗಿ ನೇಮಿಸಿಕೊಂಡದ್ದು ಸಾಮಾಜಿಕ ಸಮಾನತೆಗೆ ಅತ್ಯುತ್ತಮ ನಿದರ್ಶನವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಯ ಸಿಬ್ಬಂದಿಗಳಾದ ಎಂ.ಎಂ. ವಿಭೂತಿ, ಹನುಮಂತ ಗುಜ್ಜಲ್, ಸಾಗರ ಚಿತ್ರಗಾರ ಹಾಗೂ ಮೌನೇಶ ಹಡಪದ, ಸಂತೋಷ ಹಡಪದ, ನಿಂಗಪ್ಪ ಹಡಪದ, ಬೂದೀಶ ಹಡಪದ, ಕಿರಣ ಹಡಪದ, ಮಂಜುನಾಥ ಹಡಪದ, ಶಂಕ್ರಪ್ಪ ಹಡಪದ ಸೇರಿದಂತೆ ಹಲವರು ಭಾಗವಹಿಸಿದ್ದರು.

### ಪತ್ರಿಕಾ ದಿನಾಚರಣೆ ಸಮಾರಂಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ ಹೇಳಿಕೆ

# ಸತ್ಯದ ಪರ ನಿಲ್ಲುವ ಪತ್ರಿಕೆಗಳೇ ಸಮಾಜದ ನಿಜವಾದ ಆಸ್ತಿ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**



ಸತ್ಯ, ಸಾಮಾಜಿಕ ನ್ಯಾಯ ಹಾಗೂ ಜನಪರ ಮೌಲ್ಯಗಳನ್ನು ಎತ್ತಿಹಿಡಿದು ಸಮಾಜಕ್ಕೆ ಸತ್ಯದ ಅರಿವು ಮೂಡಿಸುವ ಪತ್ರಿಕೆಗಳೇ ಸಮಾಜದ ನಿಜವಾದ ಆಸ್ತಿಯಾಗಿದ್ದು, ಪತ್ರಿಕೋದ್ಯಮ ತನ್ನ ಧರ್ಮವನ್ನು ಎಂದಿಗೂ ಮರೆಯಬಾರದು ಎಂದು ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ ಹೇಳಿದರು.

ಶಿರಹಟ್ಟಿಯ ಡಿ. ದೇವರಾಜ ಅರಸು ಸಭಾಭವನದಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪತ್ರಿಕೋದ್ಯಮ ಜನರ ಧ್ವನಿಯಾಗಿ ಕಾರ್ಯನಿರ್ವಹಿಸಬೇಕು. ಪತ್ರಕರ್ತರು ಯಾವುದೇ ಒತ್ತಡ, ಆಮಿಷಗಳಿಗೆ ಮಣಿಯದೆ ಸತ್ಯವನ್ನು ನಿರ್ಭೀತಿಯಿಂದ ಸಮಾಜದ ಮುಂದೆ ತರುವ ಜವಾಬ್ದಾರಿ ಹೊಂದಿದ್ದಾರೆ. ಅಂತಹ ಪತ್ರಿಕೆಗಳಿಗೆ ಮಾತ್ರ ಜನರ ವಿಶ್ವಾಸ ಮತ್ತು ಗೌರವ ದೊರೆಯುತ್ತದೆ ಎಂದು ಹೇಳಿದರು.

ಶಿರಹಟ್ಟಿಯಲ್ಲಿ ಪತ್ರಿಕಾ ಭವನ ನಿರ್ಮಾಣಕ್ಕೆ ಪತ್ರಕರ್ತರು ಸಂಕಲ್ಪ ಮಾಡಿದರೆ ನಿವೇಶನ ಖರೀದಿ ಹಾಗೂ ಭವನ ನಿರ್ಮಾಣಕ್ಕೆ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಟಿಉತ್ತರಪ್ರಭ ಪತ್ರಿಕೆಟಿ ಸಂಪಾದಕ ಹಾಗೂ ನ್ಯಾಯವಾದಿ ರವಿಕಾಂತ ಅಂಗಡಿ ಮಾತನಾಡಿ, ಸಾಮಾಜಿಕ ಜಾಲತಾಣಗಳ ಪ್ರಭಾವದಿಂದ ಮುದ್ರಣ ಮಾಧ್ಯಮ ಸವಾಲು ಎದುರಿಸುತ್ತಿದ್ದರೂ ಸಮಾಜ ಮತ್ತು ಸರ್ಕಾರಕ್ಕೆ ಸತ್ಯದ ಅರಿವು ಮೂಡಿಸುವಲ್ಲಿ ಪತ್ರಿಕೆಗಳ ಪಾತ್ರ ಇಂದಿಗೂ ಮಹತ್ವದ್ದಾಗಿದೆ.

ಪ್ರತಿಯೊಬ್ಬರೂ ಪತ್ರಿಕೆಗಳನ್ನು ಖರೀದಿಸಿ ಓದುವ ಮೂಲಕ ಪತ್ರಿಕೋದ್ಯಮವನ್ನು ಉಳಿಸಬೇಕು ಎಂದು ಕರೆ ನೀಡಿದರು.

ಪತ್ರಕರ್ತರಿಗೆ ಸ್ವಂತ ನೆಲೆ ಅಗತ್ಯವಾಗಿದ್ದು, ಸ್ಥಳೀಯ ಪಟ್ಟಣ ಪಂಚಾಯಿತಿ ನಿವೇಶನ ಒದಗಿಸಿದರೆ ಪತ್ರಿಕಾ ಭವನ ನಿರ್ಮಾಣಕ್ಕೆ ಆರ್ಥಿಕ ನೆರವು ನೀಡುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಎಚ್ .ಡಿ. ಮಾಗಡಿ, ಡಾ. ವೆಂಕಟೇಶ ರಾಠೋಡ, ಎಸ್ .ಬಿ. ಮಹಾಜನಶೆಟ್ಟರ, ವಿ.ವಿ. ಕಪ್ಪತ್ತನವರ, ಡಿ.ಕೆ. ಹೊನ್ನಪ್ಪನವರ, ಡಾ. ಪ್ರಕಾಶ ಹೊಸಮನಿ, ಶರಣಬಸವ ಪಾಟೀಲ ಸೇರಿದಂತೆ ಹಲವರು ಮಾತನಾಡಿ, ಪತ್ರಿಕೋದ್ಯಮದ ಸಾಮಾಜಿಕ ಹೊಣೆಗಾರಿಕೆ, ಪತ್ರಿಕಾ ಭವನ ನಿರ್ಮಾಣದ ಅಗತ್ಯತೆ ಹಾಗೂ ಪತ್ರಕರ್ತರ ಸೇವೆಯನ್ನು ಪ್ರಶಂಸಿಸಿದರು.

> **ಸತ್ಯವನ್ನು ನಿರ್ಭೀತಿಯಿಂದ ಸಮಾಜದ ಮುಂದೆ ತರುವ ಪತ್ರಿಕೆಗಳೇ ಪ್ರಜಾಪ್ರಭುತ್ವದ ಶಕ್ತಿಯಾಗಿವೆ. ಪತ್ರಿಕೋದ್ಯಮ ತನ್ನ ಧರ್ಮವನ್ನು ಉಳಿಸಿಕೊಂಡಾಗ ಮಾತ್ರ ಸಮಾಜದಲ್ಲಿ ಅದರ ವಿಶ್ವಾಸ ಉಳಿಯುತ್ತದೆ.**
>
> **- ಸುಜಾತಾ ದೊಡ್ಡಮನಿ,**
> ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ

ಇದೇ ವೇಳೆ ಪತ್ರಿಕಾ ಭವನ ನಿರ್ಮಾಣಕ್ಕೆ ತಲಾ ₹25 ಸಾವಿರ ಆರ್ಥಿಕ ನೆರವು ನೀಡುವುದಾಗಿ ಭರವಸೆ ವ್ಯಕ್ತಪಡಿಸಿದರು.

ಸ್ಥಳೀಯ ಮಠದ ಪೀಠಾಧ್ಯಕ್ಷ ಶ್ರೀ ಫಕೀರಸಿದ್ದರಾಮ ಸ್ವಾಮೀಜಿ ಮಾತನಾಡಿ, ಸೇವಾ ಮನೋಭಾವದಿಂದ ಸಮಾಜಕ್ಕೆ ಬೆಳಕು ಚೆಲ್ಲುತ್ತಿರುವ ಪತ್ರಕರ್ತರ ಕಾರ್ಯ ಶ್ಲಾಘನೀಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮಹಾದೇವಪ್ಪ ಸ್ವಾಮಿ ಮಾತನಾಡಿ, ಪತ್ರಿಕಾ ಭವನ ನಿರ್ಮಾಣಕ್ಕೆ ಸಹಕಾರ ನೀಡಿದ ಗಣ್ಯರಿಗೆ ಅಭಿನಂದನೆ ಸಲ್ಲಿಸಿದರು.

ಇದೇ ಸಂದರ್ಭದಲ್ಲಿ ಸಂಘದ ವತಿಯಿಂದ ಮಂಜುನಾಥ ಅರೆಪಲ್ಲಿ ಹಾಗೂ ಅರ್ಷದ್ ಅಲಿ ಖಾಜಿ ಅವರಿಗೆ ವಾರ್ಷಿಕ ಅತ್ಯುತ್ತಮ ಪತ್ರಕರ್ತ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ, ಕಾರ್ಯದರ್ಶಿ ಚಂದ್ರು ಕುಸ್ಲಾಪೂರ, ಪ್ರ.ಕಾ. ಶರಣು ದೊಡ್ಡೂರ, ಸಿಪಿಐ ಬಿ.ವಿ. ನ್ಯಾಮಗೌಡ, ವಿಶ್ವನಾಥ ಕಪ್ಪತ್ತನವರ, ಡಾ. ಭೀಮಸಿಂಗ್ ರಾಠೋಡ, ವಿ.ಪಿ. ಮಠಪತಿ, ಎನ್ .ಆರ್. ಕುಲಕರ್ಣಿ, ವೀರಣ್ಣ ಅಂಗಡಿ, ವೀರಯ್ಯ ಮಠಪತಿ, ತಿಪ್ಪಣ್ಣ ಕೊಂಚಿಗೇರಿ, ಸಿ.ಸಿ. ನೂರಶೆಟ್ಟರ, ತಿಮ್ಮರಡ್ಡಿ ಮರಡ್ಡಿ, ಶಿವನಗೌಡ ಪಾಟೀಲ, ಮೋಹನ ಗುತ್ತೆಮ್ಮನವರ, ಎಂ.ಕೆ. ಲಮಾಣಿ, ಸಂದೀಪ ಕಪ್ಪತ್ತನವರ, ಹೊನ್ನಪ್ಪ ಶಿರಹಟ್ಟಿ, ಡಾ. ಸುನೀಲ ಬುರಬುರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ವ್ಯಸನಮುಕ್ತ ಪ್ರತಿಜ್ಞಾ ಮಹಾ ಅಭಿಯಾನಕ್ಕೆ ಚಾಲನೆ

# ನಶೆ ಬಿಟ್ಟು, ನವಜೀವನದತ್ತ ಹೆಜ್ಜೆ ಇಡಿ!



**ವಿಜಯಸಾಕ್ಷಿ ಸುದ್ದಿ, ಗದಗ**

ಯುವಜನರು ಮಾದಕ ವ್ಯಸನದ ಜೊತೆಗೆ ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಚಟದಿಂದಲೂ ದೂರ ಉಳಿದು ಆರೋಗ್ಯಕರ ಹಾಗೂ ಮೌಲ್ಯಯುತ ಜೀವನ ರೂಪಿಸಿಕೊಳ್ಳಬೇಕು ಎಂದು ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ ಅಕ್ಕ ಕರೆ ನೀಡಿದರು.

ಪ್ರಜಾಪಿತಾ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ವೈದ್ಯಕೀಯ ವಿಭಾಗದ ವತಿಯಿಂದ, ಭಾರತ ಸರ್ಕಾರದ ಟಿನಶಾ ಮುಕ್ತ ಭಾರತ ಅಭಿಯಾನಟಿ ಹಾಗೂ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋದ ಟಿಮಿಷನ್ ಸ್ಪಂದನ್ ಟಿ ಅಂಗವಾಗಿ ಹಮ್ಮಿಕೊಂಡಿದ್ದ ಟಿವ್ಯಸನಮುಕ್ತ ಪ್ರತಿಜ್ಞಾ ಮಹಾ ಅಭಿಯಾನಟಿಕ್ಕೆ ಬಸವೇಶ್ವರ ನಗರದ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಚಾಲನೆ ನೀಡಿ ಅವರು ಮಾತನಾಡಿದರು.

ಉತ್ತಮ ಆರೋಗ್ಯ, ಮನಸ್ಸಿನ ಶಾಂತಿ, ಉಜ್ವಲ ಭವಿಷ್ಯ, ಆರ್ಥಿಕ ಪ್ರಗತಿ ಹಾಗೂ ಸಂತೋಷದ ಜೀವನಕ್ಕಾಗಿ ಪ್ರತಿಯೊಬ್ಬರೂ ಎಲ್ಲ ರೀತಿಯ ವ್ಯಸನಗಳಿಂದ ದೂರವಿರಬೇಕು. ನಾವಷ್ಟೇ ಅಲ್ಲ, ನಮ್ಮ ಕುಟುಂಬ ಹಾಗೂ ಸ್ನೇಹಿತರನ್ನೂ ವ್ಯಸನಮುಕ್ತ ಜೀವನದತ್ತ ಪ್ರೇರೇಪಿಸಿ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ತಿಳಿಸಿದರು. ಇದೇ ವೇಳೆ ಎಲ್ಲರಿಂದ ವ್ಯಸನಮುಕ್ತ ಪ್ರತಿಜ್ಞೆಯನ್ನು ಬೋಧಿಸಿದರು.

ಆಗಸ್ಟ್ 20ರವರೆಗೆ ಶಾಲೆಗಳು, ಕಾಲೇಜುಗಳು, ವಿವಿಧ ಸಂಘ-ಸಂಸ್ಥೆಗಳು ಹಾಗೂ ಸಾರ್ವಜನಿಕ ಸಭೆಗಳಲ್ಲಿ ವ್ಯಸನಮುಕ್ತ ಪ್ರತಿಜ್ಞೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಯುವಕರು ಮಾದಕ ವ್ಯಸನಕ್ಕೆ ಒಳಗಾಗುವ ಮೊದಲೇ ಅವರನ್ನು ಸದೃಢಗೊಳಿಸುವುದು ಅತ್ಯಂತ ಮುಖ್ಯ. ಉತ್ತಮ ಗುರಿ, ಒಳ್ಳೆಯ ಸ್ನೇಹಿತರು, ಸಕಾರಾತ್ಮಕ ಚಿಂತನೆ, ರಾಜಯೋಗ ಧ್ಯಾನ ಹಾಗೂ ಶಿಸ್ತುಬದ್ಧ ಜೀವನಶೈಲಿ ಅಳವಡಿಸಿಕೊಂಡರೆ ಯಾವುದೇ ವ್ಯಸನದಿಂದ ದೂರ ಉಳಿಯಬಹುದು ಎಂದರು. ಮಾದಕ ವಸ್ತುಗಳಷ್ಟೇ ಅಲ್ಲ, ಮೊಬೈಲ್, ಸಾಮಾಜಿಕ ಜಾಲತಾಣ ಮತ್ತು ಆನ್‌ಲೈನ್ ಗೇಮಿಂಗ್‌ನಂತಹ ಡಿಜಿಟಲ್ ವ್ಯಸನಗಳಿಂದ ಮುಕ್ತರಾಗಲು ರಾಜಯೋಗ ಧ್ಯಾನ ಸಹಕಾರಿಯಾಗಿದೆ ಎಂದು ಹೇಳಿದರು.

ನವಜ್ಯೋತಿ ಸಮಗ್ರ ವ್ಯಸನಮುಕ್ತಿ ಮತ್ತು ಪುನರ್ವಸತಿ ಕೇಂದ್ರದ ಕಾರ್ಯದರ್ಶಿ ಬಸವರಾಜ ಬೇವಿನಮರದ ಮಾತನಾಡಿ, ಕಳೆದ 11-12 ವರ್ಷಗಳಲ್ಲಿ ಉತ್ತರ ಕರ್ನಾಟಕದಾದ್ಯಂತ ಸುಮಾರು 29 ಸಾವಿರಕ್ಕೂ ಹೆಚ್ಚು ವ್ಯಸನಿಗಳಿಗೆ ಪುನರ್ವಸತಿ ಕಲ್ಪಿಸಿ ಹೊಸ ಬದುಕು ನೀಡಲಾಗಿದೆ. ವ್ಯಸನಕ್ಕೆ ಒಳಗಾಗಿ ನಂತರ ಅದರಿಂದ ಹೊರಬರುವುದಕ್ಕಿಂತ, ಮೊದಲಿನಿಂದಲೇ ವ್ಯಸನದಿಂದ ದೂರ ಇರುವುದು ಉತ್ತಮ ಎಂದು ಹೇಳಿದರು.

> **ಮಾದಕ ವ್ಯಸನ ಮಾತ್ರವಲ್ಲ, ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ವ್ಯಸನವೂ ಯುವಜನರ ಭವಿಷ್ಯಕ್ಕೆ ಅಪಾಯ. ಆರೋಗ್ಯಕರ, ವ್ಯಸನಮುಕ್ತ ಜೀವನವೇ ಉತ್ತಮ ಭಾರತದ ಅಡಿಪಾಯ.**
>
> **- ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ ಅಕ್ಕ**

ಈಶ್ವರ್ ಸೇವಾ ಟ್ರಸ್ಟ್ ಅಧ್ಯಕ್ಷ ಮಲ್ಲಿಕಾರ್ಜುನ ಸಂತೋಜಿ ಮಾತನಾಡಿ, ಮಕ್ಕಳು ದುಶ್ಚಟಗಳಿಗೆ ಬಲಿಯಾಗದಂತೆ ಪೋಷಕರು, ವಿಶೇಷವಾಗಿ ತಾಯಂದಿರು ಅವರ ಚಟುವಟಿಕೆಗಳ ಮೇಲೆ ನಿಗಾ ವಹಿಸಬೇಕು. ಮೊಬೈಲ್ ಮತ್ತು ದೂರದರ್ಶನ ಬಳಕೆಯ ಮೇಲೂ ಗಮನ ಹರಿಸುವುದು ಅಗತ್ಯ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಈಶ್ವರ್ ಸೇವಾ ಸಂಘದ ಅಧ್ಯಕ್ಷ ಚನ್ನಬಸಪ್ಪ ಅಕ್ಕಿ, ನಿವೃತ್ತ ಶಿಕ್ಷಕ ಕೆ.ಎ. ಮೂಲಿಮನಿ, ಸಂಕ್ರಮ ಮುದ್ಗಲ್, ಶ್ವೇತಾ ಕೊಳೇಕಾರ್ ಹಾಗೂ ಬ್ರಹ್ಮಕುಮಾರ-ಬ್ರಹ್ಮಕುಮಾರಿಯರು ಉಪಸ್ಥಿತರಿದ್ದರು. ಬ್ರಹ್ಮಕುಮಾರಿ ರೇಖಾ ಸ್ವಾಗತಿಸಿ, ಬ್ರಹ್ಮಕುಮಾರಿ ಸಾವಿತ್ರಿ ವಂದಿಸಿ ದರು.

### ಪರಿಸರ ಸಂರಕ್ಷಣೆಗೆ ಲಯನ್ಸ್ ಕ್ಲಬ್‌ಗಳ ಕಾಳಜಿ

# ಗಿಡ ನೆಟ್ಟು ಗುರುಪೂರ್ಣಿಮೆ ಅರ್ಥಪೂರ್ಣ ಆಚರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಗುರುಪೂರ್ಣಿಮೆ ಅಂಗವಾಗಿ ಗದಗ-ಬೆಟಗೇರಿ ಲಯನ್ಸ್ ಕ್ಲಬ್, ಲಯನ್ ಲೇಡೀಸ್ ಕ್ಲಬ್ ಹಾಗೂ ಧಾರವಾಡದ ಗಂಧ ಪಲ್ಲವಿ ಫಾರ್ಮ್ಸ್ ಸಂಯುಕ್ತ ಆಶ್ರಯದಲ್ಲಿ ನಗರದ ಐತಿಹಾಸಿಕ ವೀರನಾರಾಯಣ ಹಾಗೂ ತ್ರಿಕೂಟೇಶ್ವರ ದೇವಸ್ಥಾನದ ಆವರಣದಲ್ಲಿ ವಿವಿಧ ಜಾತಿಯ ಸಸಿಗಳನ್ನು ನೆಡುವ ಮೂಲಕ ಹಸಿರು ಗದಗಟಿ ಅಭಿಯಾನಕ್ಕೆ ಮತ್ತಷ್ಟು ಚೈತನ್ಯ ತುಂಬಲಾಯಿತು.

ಲಯನ್ಸ್ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ಲಿಂಗರಾಜ ತೋಟದ, ಖಜಾಂಚಿ ರೇಣುಕಪ್ರಸಾದ ಶಿಗ್ಲಿಮಠ, ರಾಜಣ್ಣ ಮಲ್ಲಾಡದ, ದತ್ತು ಬೇವಿನಕಟ್ಟಿ, ಶ್ಯಾಮ್ ಮಿಸ್ಕಿನ್ , ಸಂತೋಷ ಕಬಾಡರ, ಶಿವಪ್ರಭು ನೀಲಗುಂದ, ಪ್ರಕಾಶ ರಾಯ್ಕರ್, ಸಂತೋಷ ಕುರ್ಡೇಕರ, ದೇವಿದಾಸ ವಜ್ರೇಶ್ವರಿ ಸೇರಿದಂತೆ ಸದಸ್ಯರು ಹಾಗೂ ಲಯನ್ ಲೇಡೀಸ್ ಕ್ಲಬ್ ಅಧ್ಯಕ್ಷೆ ಅಮೃತಾ ವಾರಕರ, ಕಾರ್ಯದರ್ಶಿ ಅಪರ್ಣಾ ತೋಟದ, ಖಜಾಂಚಿ ಪ್ರಿಯಾ ಶಿಗ್ಲಿಮಠ, ಪ್ರತಿಭಾ ಬೇವಿನಕಟ್ಟಿ, ಅಶ್ವಿನಿ ನೀಲಗುಂದ ಸೇರಿದಂತೆ ಅನೇಕರು ಪಾಲ್ಗೊಂಡು ಸಸಿ ನೆಟ್ಟರು. ಈಗಾಗಲೇ ಗದುಗಿನ ವೀರಶೈವ ರುದ್ರ ಭೂಮಿ ಹಾಗೂ ಲಕ್ಕುಂಡಿ ಪ್ರದೇಶದಲ್ಲಿ ಸಸಿ ನೆಡುವ ಕಾರ್ಯ ಕೈಗೊಂಡಿರುವ ಸಂಘಟಕರು, ಜಿಲ್ಲೆಯ ಪ್ರತಿಯೊಂದು ಪೆಟ್ರೋಲ್ ಬಂಕ್‌ನಲ್ಲಿ ಕನಿಷ್ಠ ಎರಡು ಗಿಡ ನೆಡುವ ಮಹತ್ವಾಕಾಂಕ್ಷೆಯ ಯೋಜನೆಯನ್ನು ಆರಂಭಿಸಿದ್ದಾರೆ. ಈ ಅಭಿಯಾನಕ್ಕೆ ಅಗತ್ಯವಿರುವ ಸಸಿಗಳನ್ನು ಈಗಾಗಲೇ ಸಂಗ್ರಹಿಸಲಾಗಿದ್ದು, ಪೆಟ್ರೋಲ್ ಬಂಕ್ ಮಾಲೀಕರು ಸ್ಥಳಾವಕಾಶ ಕಲ್ಪಿಸಿದರೆ ಗಿಡ ನೆಡುವುದು, ನೀರುಣಿಸುವುದು, ಸ್ವಚ್ಛತೆ ಹಾಗೂ ನಿರ್ವಹಣೆಯ ಸಂಪೂರ್ಣ ಹೊಣೆಯನ್ನು ಗಂಧ ಪಲ್ಲವಿ ಫಾರ್ಮ್ಸ್‌ನ ಸ್ವಯಂಸೇವಕರು ವಹಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು.


> **ಒಂದು ಗಿಡ ನೆಡುವುದು ಎಂದರೆ ಕೇವಲ ಮರ ಬೆಳೆಸುವುದಲ್ಲ, ಮುಂದಿನ ಪೀಳಿಗೆಗೆ ಶುದ್ಧ ಗಾಳಿ ಮತ್ತು ಆರೋಗ್ಯಕರ ಪರಿಸರವನ್ನು ಉಡುಗೊರೆಯಾಗಿ ನೀಡಿದಂತೆಯೇ. ಹಸಿರು ಗದಗ ನಿರ್ಮಾಣದಲ್ಲಿ ಪ್ರತಿಯೊಬ್ಬರೂ ಭಾಗಿಯಾಗಬೇಕು.**
>
> **- ಸುಧನ್ವ ಅವಧಾನಿ,**
> ಗಂಧ ಪಲ್ಲವಿ ಫಾರ್ಮ್ಸ್ ಸಂಘಟಕರು

ಪ್ರತಿ ಸಸಿಯ ಉಸ್ತುವಾರಿಗೆ ಪ್ರತ್ಯೇಕ ಸ್ವಯಂಸೇವಕರನ್ನು ನೇಮಿಸಲಾಗುವುದು. ಆಸಕ್ತ ಸ್ವಯಂಸೇವಕರು 9481234602 ಸಂಖ್ಯೆಗೆ ಸಂಪರ್ಕಿಸಬಹುದಾಗಿದ್ದು, ಅಗತ್ಯ ವೆಚ್ಚವನ್ನೂ ಭರಿಸಲಾಗುವುದು ಎಂದು ಗಂಧ ಪಲ್ಲವಿ ಫಾರ್ಮ್ಸ್ ಸಂಘಟಕರಾದ ಸುಧನ್ವ ಅವಧಾನಿ ಹಾಗೂ ಈರಪ್ಪ ತಟ್ಟಿಮನಿ ತಿಳಿಸಿದರು.

ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿಯಾಗಿದ್ದು, ವಿದ್ಯಾರ್ಥಿಗಳು, ಯುವಕರು, ಮಹಿಳಾ ಮಂಡಳಿಗಳು, ಸಾಮಾಜಿಕ ಸಂಘಟನೆಗಳು ಹಾಗೂ ಶಾಲಾ-ಕಾಲೇಜುಗಳು ತಮ್ಮ ಮನೆ, ಶಾಲೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸಸಿ ನೆಟ್ಟು ಹಸಿರು ಗದಗ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಅವರು ಮನವಿ ಮಾಡಿದರು.

# ಗುರುವಿನ ಸೇವೆಯೇ ದೇವರ ಸೇವೆ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**



ನೂರು ದೇವರನ್ನು ಆರಾಧಿಸುವುದಕ್ಕಿಂತ ಒಬ್ಬ ಸದ್ಗುರುವಿನ ಸೇವೆ ಮಾಡಿದರೆ ಅದೇ ನೂರು ದೇವರ ಆರಾಧನೆಯ ಫಲ ನೀಡುತ್ತದೆ. ದೇವರನ್ನು ಕಾಣಬೇಕಾದರೆ ಮೊದಲು ಗುರುವಿನ ಶರಣಾಗಬೇಕು ಎಂದು ಹರ್ಲಾಪುರ ಕೊಟ್ಟೂರೇಶ್ವರ ಮಠದ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಹೇಳಿದರು.

ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಸುರೇಶ ಅಬ್ಬಿಗೇರಿ ಅವರ ನಿವಾಸದಲ್ಲಿ ಅನ್ನಪೂರ್ಣೇಶ್ವರಿ ಸತ್ಸಂಗ ಸಮಿತಿ ಹಾಗೂ ಸಿದ್ಧ ಸಮಾಧಿ ಯೋಗ ಸಾಧಕರ ಬಳಗದ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಅನ್ನಪೂರ್ಣೇಶ್ವರಿ ಪೂಜೆ, ಮಹಾಮೃತ್ಯುಂಜಯ ಹೋಮ ಹಾಗೂ ಗುರುಪೂರ್ಣಿಮೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಕಳೆದ 22 ವರ್ಷಗಳಿಂದ ಅನ್ನಪೂರ್ಣೇಶ್ವರಿ ಸತ್ಸಂಗ ಸಮಿತಿಯು ಮನೆ ಮನೆಗಳಲ್ಲಿ ಅನ್ನಪೂರ್ಣೇಶ್ವರಿ ಪೂಜೆ, ಮಹಾಮೃತ್ಯುಂಜಯ ಹೋಮ ಹಾಗೂ ಅನ್ನದಾನದ ಮಹತ್ವ ಸಾರುವ ಮೂಲಕ ಸಮಾಜಮುಖಿ ಹಾಗೂ ಆಧ್ಯಾತ್ಮಿಕ ಕಾರ್ಯಗಳನ್ನು ನಿರಂತರವಾಗಿ ನಡೆಸುತ್ತಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಂಕ್ರಯ್ಯಶಾಸ್ತ್ರಿ ಹಿರೇಮಠ ಮಾತನಾಡಿ, ಮಾನವನ ಬದುಕಿನಲ್ಲಿ ತಾಯಿಯಿಂದ ಆರಂಭವಾಗಿ ಶಿಕ್ಷಕರು ಹಾಗೂ ಸದ್ಗುರುವಿನ ಮಾರ್ಗದರ್ಶನದ ಮೂಲಕವೇ ಜೀವನ ಪರಿಪೂರ್ಣವಾಗುತ್ತದೆ. ಆಧ್ಯಾತ್ಮಿಕ ಬದುಕಿನಲ್ಲಿ ಸದ್ಗುರುವಿನ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ಆಚಾರ್ಯ ರಾಘವೇಂದ್ರ ಕೊಪ್ಪಳ ಮಹಾಮೃತ್ಯುಂಜಯ ಹೋಮ ನೆರವೇರಿಸಿ ಅದರ ಮಹತ್ವವನ್ನು ವಿವರಿಸಿದರು. ರಮೇಶ ಬದ್ನಿಮಠ ಗುರುವಿನ ಶಕ್ತಿಯ ಕುರಿತು ಉಪನ್ಯಾಸ ನೀಡಿದರು. ಶಿಕ್ಷಕ ಬಸವರಾಜ ಕಣವಿ ಧ್ಯಾನದ ಮಹತ್ವ ಹಾಗೂ ಧ್ಯಾನದಿಂದ ಆಗುವ ಮಾನಸಿಕ ಮತ್ತು ಆಧ್ಯಾತ್ಮಿಕ ಲಾಭಗಳ ಕುರಿತು ಪ್ರಾಯೋಗಿಕ ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳಿಗೆ ಪಾದಪೂಜೆ ನೆರವೇರಿಸಿ ಸನ್ಮಾನಿಸಲಾಯಿತು. ಬಳಿಕ ಅನ್ನಸಂತರ್ಪಣೆ ನಡೆಯಿತು.

ಕಾರ್ಯಕ್ರಮದಲ್ಲಿ ಕೆ.ಬಿ. ಕೊಣ್ಣೂರು, ಆರ್.ಎನ್ . ಗೌಡರ, ಕೆ.ಆರ್. ಕೋರಿ, ಸಿದ್ದಪ್ಪ ಚಬ್ಬರಭಾವಿ, ಅಶೋಕ ಬೂದಿಹಾಳ, ಗಿರಿಜಮ್ಮ ಚಬ್ಬರಭಾವಿ, ಲಕ್ಷ್ಮವ್ವ ಗೌಳಿ, ನೀಲಮ್ಮ ವಡ್ಡರ, ರವಿಚಂದ್ರ ಅಬ್ಬಿಗೇರಿ, ಡಾ. ಬಿ.ಬಿ. ತಿಮ್ಮಾಪೂರ, ಶಿವು ನಾಗಾವಿಮಠ ಸೇರಿದಂತೆ ಸಿದ್ಧ ಸಮಾಧಿ ಯೋಗ ಸಾಧಕರು ಭಾಗವಹಿಸಿದ್ದರು. ವಿ.ಸಿ. ಕುಂಬಾರ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

# ಮೆದುಳಿನ ಆರೋಗ್ಯ ಕಾಪಾಡಲು ಆರೋಗ್ಯಕರ ಜೀವನಶೈಲಿ ಅಗತ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ಆರೋಗ್ಯಕರ ಜೀವನಶೈಲಿ, ಸಮರ್ಪಕ ನಿದ್ರೆ, ಯೋಗಾಭ್ಯಾಸ ಹಾಗೂ ಒತ್ತಡ ನಿರ್ವಹಣೆಯ ಮೂಲಕ ಮೆದುಳಿನ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಅತ್ಯಗತ್ಯ ಎಂದು ಹೆಚ್ಚುವರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪುಷ್ಪಾ ಪಾಟೀಲ ಹೇಳಿದರು.

ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ (ಕಭಿ) ಕಾರ್ಯಕ್ರಮದಡಿ ವಿಶ್ವ ಮೆದುಳು ದಿನಾಚರಣೆ ಅಂಗವಾಗಿ ಹರ್ತಿ ಸರ್ಕಾರಿ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಚಿತ್ರಕಲೆ ಸ್ಪರ್ಧೆ ಹಾಗೂ ಬೆಂಕಿ ಇಲ್ಲದೆ ಆಹಾರ ತಯಾರಿಕೆ ಸ್ಪರ್ಧೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಕಭಿ ಜಿಲ್ಲಾ ಸಂಯೋಜಕರು, ಮೆದುಳಿನ ಆರೋಗ್ಯ ಕಾಪಾಡುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ರಸ್ತೆ ಅಪಘಾತಗಳಿಂದ ಮೆದುಳಿನ ಗಾಯಗಳನ್ನು ತಡೆಯಲು ವಾಹನ ಚಲಾಯಿಸುವಾಗ ಹೆಲ್ಮೆಟ್ ಹಾಗೂ ಸೀಟ್‌ಬೆಲ್ಟ್ ಕಡ್ಡಾಯವಾಗಿ ಬಳಸಬೇಕು ಎಂದು ಸಲಹೆ ನೀಡಿದರು. ಕಭಿ ಕಾರ್ಯಕ್ರಮದ ಕ್ಲಿನಿಕಲ್ ಮನಶ್ಶಾಸ್ತ್ರಜ್ಞ ರೇವಣಸಿದ್ದಪ್ಪ ಮಾತನಾಡಿ, ವಿದ್ಯಾರ್ಥಿಗಳು ಒತ್ತಡ ಮತ್ತು ಭಯವನ್ನು ಸಮರ್ಥವಾಗಿ ನಿಭಾಯಿಸುವ ವಿಧಾನಗಳ ಕುರಿತು ಮಾಹಿತಿ ನೀಡಿದರು. ಅಗತ್ಯವಿದ್ದಾಗ ಆಪ್ತಸಮಾಲೋಚನೆ ಪಡೆಯುವುದರಿಂದ ಮಾನಸಿಕ ಆರೋಗ್ಯ ಉತ್ತಮವಾಗಿರುತ್ತದೆ ಎಂದು ತಿಳಿಸಿದರು.

ಶಾಲೆಯ ಮುಖ್ಯೋಪಾಧ್ಯಾಯಿನಿ ಗೀತಾ ಎಸ್ . ಸಿಂದಗಿ ಮಾತನಾಡಿ, ವಿಶ್ವ ಮೆದುಳು ದಿನಾಚರಣೆ ಅಂಗವಾಗಿ ಆಯೋಜಿಸಿರುವ ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಆರೋಗ್ಯ ಜಾಗೃತಿ ಮೂಡಿಸುವುದರ ಜೊತೆಗೆ ಜ್ಞಾಪಕ ಶಕ್ತಿ ವೃದ್ಧಿಗೂ ಸಹಕಾರಿಯಾಗಲಿವೆ ಎಂದರು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಚಿತ್ರಕಲೆ ಹಾಗೂ ಬೆಂಕಿ ಇಲ್ಲದೆ ಆಹಾರ ತಯಾರಿಕೆ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡರು. ವಿಜೇತರಿಗೆ ಬಹುಮಾನ ವಿತರಿಸಿ ಕಾರ್ಯಕ್ರಮ ಸಮಾರೋಪ ಗೊಳಿಸಲಾಯಿತು.

# ಬೆಳೆ ಸಮೀಕ್ಷೆ ಪೂರ್ಣಗೊಳಿಸಿ, ಸರ್ಕಾರಿ ಸೌಲಭ್ಯ ಪಡೆಯಿರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಕಾರ್ಯ ಶೇ.84.68ರಷ್ಟು ಪೂರ್ಣಗೊಂಡಿದ್ದು, ಇನ್ನೂ ಸಮೀಕ್ಷೆ ಮಾಡಿಸದ ರೈತರು ಕೂಡಲೇ ತಮ್ಮ ಜಮೀನಿನ ಬೆಳೆ ವಿವರಗಳನ್ನು ದಾಖಲಿಸಿಕೊಳ್ಳುವಂತೆ ಕೃಷಿ ಇಲಾಖೆ ಮನವಿ ಮಾಡಿದೆ. 2026-27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 3.35 ಲಕ್ಷ ತಾಕುಗಳಲ್ಲಿ ಬೆಳೆ ಸಮೀಕ್ಷೆ ನಡೆಸುವ ಗುರಿ ಹೊಂದಲಾಗಿದ್ದು, ಇದುವರೆಗೆ 2,83,704 ತಾಕುಗಳ ಸಮೀಕ್ಷೆ ಪೂರ್ಣಗೊಂಡಿದೆ. ರೈತರು ತಮ್ಮ ಜಮೀನಿನಲ್ಲಿ ಬೆಳೆದಿರುವ ಬೆಳೆಗಳ ಮಾಹಿತಿಯನ್ನು ಮೊಬೈಲ್ ಆ್ಯಪ್ ಮೂಲಕ ಛಾಯಾಚಿತ್ರ ಸಮೇತ ಅಪ್‌ಲೋಡ್ ಮಾಡಲು ಅವಕಾಶ ಕಲ್ಪಿಸಲಾಗಿದೆ. ಇದಕ್ಕಾಗಿ ಖಾಸಗಿ ನಿವಾಸಿಗಳ ಸಹಾಯ ಪಡೆಯಬಹುದಾಗಿದ್ದು, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜಾಗೃತಿ ಮೂಡಿಸುವ ಜೊತೆಗೆ ರೈತರು, ಖಾಸಗಿ ನಿವಾಸಿಗಳು ಹಾಗೂ ಮೇಲ್ವಿಚಾರಕರಿಗೆ ತಾಲೂಕು ಮಟ್ಟದಲ್ಲಿ ತರಬೇತಿಯನ್ನೂ ನೀಡಲಾಗಿದೆ. ಬೆಳೆ ಸಮೀಕ್ಷೆ ಪೂರ್ಣಗೊಂಡರೆ ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯ ವಿವಿಧ ಯೋಜನೆಗಳ ಸೌಲಭ್ಯ ಪಡೆಯಲು ಅನುಕೂಲವಾಗಲಿದೆ. ಅಲ್ಲದೆ, ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ನೋಂದಣಿ, ಬೆಳೆ ವಿಮೆ, ಬೆಳೆ ಸಾಲ ಹಾಗೂ ಬೆಳೆ ಹಾನಿ ಪರಿಹಾರ ಪಡೆಯಲು ಬೆಳೆ ಸಮೀಕ್ಷೆ ಅತ್ಯಗತ್ಯವಾಗಿದೆ.

## ಸಂಕ್ಷಿಪ್ತ ಸುದ್ದಿಗಳು

### ಇನ್ನರ್ ವೀಲ್ ಕ್ಲಬ್ ಗದಗ- ಬೆಟಗೇರಿಯಿಂದ ಸೇವಾ ಕಾರ್ಯ

# ಗೋಶಾಲೆಯ ಗೋವುಗಳಿಗೆ ಪೌಷ್ಟಿಕ ಆಹಾರ ವಿತರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ಮಾನವೀಯತೆ ಹಾಗೂ ಪ್ರಾಣಿ ಕಲ್ಯಾಣದ ಸಂದೇಶ ಸಾರುವ ಉದ್ದೇಶದಿಂದ ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ನಗರದ ಕಳಸಾಪುರ ರಸ್ತೆಯಲ್ಲಿರುವ ಮಹಾವೀರ ಗೋಶಾಲೆಯ ಗೋವುಗಳಿಗೆ ಪೌಷ್ಟಿಕ ಆಹಾರ ವಿತರಿಸುವ ಸೇವಾ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಗೋಶಾಲೆಯಲ್ಲಿರುವ ಗೋವುಗಳಿಗೆ ಹಸಿರು ಮೇವು, ಬೆಲ್ಲ, ದವಸ-ಧಾನ್ಯ, ತರಕಾರಿಗಳು ಹಾಗೂ ಹಣ್ಣುಗಳನ್ನು ವಿತರಿಸಲಾಯಿತು. ಕ್ಲಬ್ ಸದಸ್ಯೆಯರು ಸ್ವತಃ ಗೋವುಗಳಿಗೆ ಆಹಾರ ನೀಡುವ ಮೂಲಕ ಪ್ರಾಣಿ ಪ್ರೇಮ ಹಾಗೂ ಸಾಮಾಜಿಕ ಜವಾಬ್ದಾರಿಯ ಸಂದೇಶ ಸಾರಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕ್ಲಬ್ ಅಧ್ಯಕ್ಷೆ ಮಂಜುಳಾ ಅಕ್ಕಿ, ಗೋಶಾಲೆಗಳ ನಿರ್ವಹಣೆಗೆ ಸಮಾಜದ ಸಹಕಾರ ಅತ್ಯಗತ್ಯವಾಗಿದೆ. ಇಂತಹ ಸೇವಾ ಕಾರ್ಯಗಳು ಗೋವುಗಳ ಆರೈಕೆಗೆ ನೆರವಾಗುವುದರ ಜೊತೆಗೆ ದಯೆ, ಕರುಣೆ ಹಾಗೂ ಪರಿಸರ ಸಂರಕ್ಷಣೆಯಂತಹ ಮೌಲ್ಯಗಳನ್ನು ಬೆಳೆಸುತ್ತವೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕ್ಲಬ್ ಕಾರ್ಯದರ್ಶಿ ಪೂಜಾ ಭೂಮಾ, ಪದಾಧಿಕಾರಿಗಳು ಹಾಗೂ ಸದಸ್ಯೆಯರು ಭಾಗವಹಿಸಿ, ಗೋಶಾಲೆಯ ಸಿಬ್ಬಂದಿಯ ಸೇವೆಯನ್ನು ಅಭಿನಂದಿಸಿದರು.

ಇನ್ನರ್ ವೀಲ್ ಕ್ಲಬ್ ವತಿಯಿಂದ ಮುಂದೆಯೂ ಸಮಾಜಮುಖಿ ಹಾಗೂ ಪ್ರಾಣಿ ಕಲ್ಯಾಣ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಲಾಯಿತು.

**ಗೋಶಾಲೆಗಳ ನಿರ್ವಹಣೆಗೆ ಸಮಾಜದ ಸಹಕಾರ ಅತ್ಯಗತ್ಯ. ಇಂತಹ ಸೇವಾ ಕಾರ್ಯಗಳು ಗೋವುಗಳ ಆರೈಕೆಯ ಜೊತೆಗೆ ದಯೆ, ಕರುಣೆ ಮತ್ತು ಸಾಮಾಜಿಕ ಜವಾಬ್ದಾರಿಯ ಮೌಲ್ಯಗಳನ್ನು ಬಲಪಡಿಸುತ್ತವೆ.**

– **ಮಂಜುಳಾ ಅಕ್ಕಿ,** ಅಧ್ಯಕ್ಷೆ, ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿ

### ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದಲ್ಲಿ ಗುರುಪೂರ್ಣಿಮೆ

# ಗುರಿ ಸಾಧನೆಗೆ ಗುರುಕೃಪೆಯೇ ಭದ್ರ ಬುನಾದಿ



**ವಿಜಯಸಾಕ್ಷಿ ಸುದ್ದಿ, ಗದಗ**

ಜೀವನದಲ್ಲಿ ಗುರಿ ಸಾಧನೆ, ವ್ಯಕ್ತಿತ್ವ ವಿಕಸನ ಹಾಗೂ ಯಶಸ್ಸಿಗೆ ಗುರುಗಳ ಮಾರ್ಗದರ್ಶನ ಮತ್ತು ಕೃಪೆಯೇ ಭದ್ರ ಬುನಾದಿಯಾಗಿದ್ದು, ಗುರುಗಳು ಬೋಧಿಸಿದ ಜ್ಞಾನ ಮತ್ತು ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗಲೇ ಗುರುಪೂರ್ಣಿಮೆ ಆಚರಣೆಗೆ ನಿಜವಾದ ಅರ್ಥ ಬರುತ್ತದೆ ಎಂದು ಡಿ.ಜಿ.ಎಂ. ಆಯುರ್ವೇದ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಎಂ.ವಿ. ಐಹೊಳ್ಳಿ ಹೇಳಿದರು.

ಎಸ್ .ವೈ.ಬಿ.ಎಂ.ಎಸ್ . ಯೋಗ ಪಾಠಶಾಲೆ ಹಾಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸಹಯೋಗದಲ್ಲಿ ಸಿದ್ಧಲಿಂಗನಗರದ ಬಸವ ಯೋಗ ಮಂದಿರದಲ್ಲಿ ನಡೆದ 109ನೇ ಮಾಸಿಕ ವಚನ ಶ್ರವಣ ಹಾಗೂ ಗುರುಪೂರ್ಣಿಮೆ ಆಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಸವಣ್ಣನವರು ತಮ್ಮ ವಚನದಲ್ಲಿ ನೀನೊಲಿದರೆ ಕೊರಡು ಕೊನರುವುದಯ್ಯಾ ಎಂದು ಗುರುಕೃಪೆಯ ಮಹತ್ವವನ್ನು ಸಾರಿದ್ದಾರೆ. ಗುರುವಿನ ಒಲುಮೆ ಇದ್ದರೆ ಅಸಾಧ್ಯವೂ ಸಾಧ್ಯವಾಗುತ್ತದೆ. ಇಂದಿನ ದಿನಗಳಲ್ಲಿ ಗುರುಪೂರ್ಣಿಮೆಯನ್ನು ಕೇವಲ ಪೂಜೆ, ಕಾಣಿಕೆ, ಅನ್ನಸಂತರ್ಪಣೆ ಅಥವಾ ಶುಭಾಶಯಗಳಿಗೆ ಸೀಮಿತಗೊಳಿಸದೆ, ಗುರುಗಳು ಬೋಧಿಸಿದ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಆಚರಣೆ ಸಾರ್ಥಕವಾಗುತ್ತದೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಗುರುಬಸವ ಸಿಬಿಎಸ್‌ಇ ಶಾಲೆಯ ಶಿಕ್ಷಕಿ ಸುನಂದಾ ಜ್ಞಾನೋಪಂತ ಮಾತನಾಡಿ, ಗುರುಗಳು ಕೇವಲ ವಿದ್ಯೆಯನ್ನು ಬೋಧಿಸುವವರಲ್ಲ; ಬದುಕಿನ ದಾರಿಯನ್ನು ತೋರಿಸುವ ಮಾರ್ಗದರ್ಶಕರು. ಬಸವಣ್ಣನವರ ಜ್ಯೋತಿಯೊಳಡಗಿದ ಜ್ಯೋತಿ ಅಂತಿರಬೇಕು ಎಂಬ ವಚನದಂತೆ ಶಿಷ್ಯರು ಗುರುವಿನ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್ . ಪಲ್ಲೇದ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ವಿಜಯಲಕ್ಷ್ಮೀ ಆನೆಹೊಸೂರು ಹಾಗೂ ಸಮಾಜಸೇವಕಿ ಪ್ರಭಾವತಿ ಕುಲಕರ್ಣಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಗಂಗಮ್ಮ ಹಿಟಬುತ್ತಿ, ಶೋಭಾ ಭಾಂಡಗೆ, ಅನ್ನಪೂರ್ಣ ಅಸೂಟಿ, ಸಂಗೀತಾ ನಾಕೋಡ, ಪಾರ್ವತಿ ಭೂಮಾ, ಸರೋಜಾ ಕೋಗಲಿ, ನೀಲಾವತಿ ರಾಯಾಪೂರ, ಕಸ್ತೂರಿ ಮುಂದಿನಮನಿ, ಗೌರಿ ಜಿರಂಕಳಿ, ಶಾರದಾ ಇನಾಮತಿ, ವೀಣಾ ಅಕ್ಕಿ, ಶಂಕ್ರಮ್ಮ ಮಾಳಶೆಟ್ಟಿ, ವೀಣಾ ಮಾಲಿಪಾಟೀಲ ಸೇರಿದಂತೆ ಅನೇಕರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಗಿರಿಜಾ ನಾಲತ್ವಾಡಮಠ, ಜಯಶ್ರೀ ದಾವಣಗೇರಿ ಹಾಗೂ ಸುಮಾ ಸುರೇಬಾನ ಯೋಗ ಗುರುಗಳನ್ನು ಸನ್ಮಾನಿಸಿದರು.

ಆರಂಭದಲ್ಲಿ ಮಹಾದೇವಿ ಚರಂತಿಮಠ ಸಾಮೂಹಿಕ ಬಸವ ಪ್ರಾರ್ಥನೆ ನಡೆಸಿಕೊಟ್ಟರು. ಅರುಣಾ ಇಂಗಳಳ್ಳಿ ಸ್ವಾಗತಿಸಿದರು. ಜಯಶ್ರೀ ವಸ್ತ್ರದ ವಂದಿಸಿದರು. ಕೇಂದ್ರದ ಕಾರ್ಯದರ್ಶಿ ಸುಲೋಚನಾ ಐಹೊಳ್ಳಿ ಕಾರ್ಯಕ್ರಮ ನಿರೂಪಿಸಿದರು.

**ಗುರುಗಳಿಗೆ ಕಾಣಿಕೆ ನೀಡುವುದಕ್ಕಿಂತ ಅವರು ಬೋಧಿಸಿದ ಜ್ಞಾನ, ಮೌಲ್ಯ ಮತ್ತು ಆದರ್ಶಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಸಮಾಜದ ಒಳಿತಿಗೆ ಬಳಸಿದಾಗಲೇ ಗುರುಪೂರ್ಣಿಮೆ ಆಚರಣೆ ಸಾರ್ಥಕವಾಗುತ್ತದೆ.**

– **ಡಾ. ಎಂ.ವಿ. ಐಹೊಳ್ಳಿ,** ನಿವೃತ್ತ ಪ್ರಾಧ್ಯಾಪಕರು

### ಆಗಸ್ಟ್ 2ರಂದು 10 ಕೇಂದ್ರಗಳಲ್ಲಿ ಪರೀಕ್ಷೆ | ಪಾರದರ್ಶಕ ಪರೀಕ್ಷೆಗೆ ಡಿಸಿ ಖಡಕ್ ಸೂಚನೆ

# ಕಾನ್‌ಸ್ಟೇಬಲ್ ಪರೀಕ್ಷೆಗೆ ಕಟ್ಟೆಚ್ಚರ

**ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆ ಅತ್ಯಂತ ಪಾರದರ್ಶಕ ಹಾಗೂ ಶಿಸ್ತುಬದ್ಧವಾಗಿ ನಡೆಯಬೇಕು. ಯಾವುದೇ ಲೋಪ, ನಿರ್ಲಕ್ಷ್ಯ ಅಥವಾ ನಿಯಮ ಉಲ್ಲಂಘನೆಗೆ ಅವಕಾಶ ನೀಡದೆ ಎಲ್ಲ ಅಧಿಕಾರಿಗಳು ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಬೇಕು.**

– **ಸಿ.ಎನ್ . ಶ್ರೀಧರ್,** ಜಿಲ್ಲಾಧಿಕಾರಿ, ಗದಗ



**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳ ನೇರ ನೇಮಕಾತಿಗಾಗಿ ಆಗಸ್ಟ್ 2ರಂದು ನಡೆಯಲಿರುವ ಲಿಖಿತ ಪರೀಕ್ಷೆಯನ್ನು ಯಾವುದೇ ಲೋಪಕ್ಕೆ ಅವಕಾಶವಿಲ್ಲದಂತೆ ಶಿಸ್ತುಬದ್ಧ, ಪಾರದರ್ಶಕ ಹಾಗೂ ಅಚ್ಚುಕಟ್ಟಾಗಿ ನಡೆಸುವಂತೆ ಜಿಲ್ಲಾಧಿಕಾರಿ ಸಿ.ಎನ್ . ಶ್ರೀಧರ್ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪರೀಕ್ಷಾ ಕೇಂದ್ರಗಳಲ್ಲಿ ಅಭ್ಯರ್ಥಿಗಳಿಗೆ ಅಗತ್ಯವಿರುವ ಎಲ್ಲಾ ಮೂಲಸೌಕರ್ಯಗಳನ್ನು ಕಲ್ಪಿಸಬೇಕು. ಪರೀಕ್ಷಾ ಕರ್ತವ್ಯಕ್ಕೆ ನಿಯೋಜನೆಯಾಗಿರುವ ಅಧಿಕಾರಿಗಳು, ಮಾರ್ಗಾಧಿಕಾರಿಗಳು, ವೀಕ್ಷಕರು ಹಾಗೂ ಮೇಲ್ವಿಚಾರಕರು ತಮ್ಮ ಜವಾಬ್ದಾರಿಯನ್ನು ಅತ್ಯಂತ ಎಚ್ಚರಿಕೆಯಿಂದ ನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ಅಹಿತಕರ ಘಟನೆ ಅಥವಾ ನಿಯಮ ಉಲ್ಲಂಘನೆಗೆ ಅವಕಾಶ ನೀಡಬಾರದು. ಪರೀಕ್ಷಾ ಪ್ರಾಧಿಕಾರದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದ ಅವರು, ಪ್ರತಿಯೊಂದು ಕೇಂದ್ರದಲ್ಲಿ ಸಿಸಿಟಿವಿ ಕ್ಯಾಮೆರಾ, ಪರೀಕ್ಷಾ ಕೊಠಡಿಯಲ್ಲಿ ಗಡಿಯಾರ, ಶುದ್ಧ ಕುಡಿಯುವ ನೀರು, ಬೆಳಕು, ಗಾಳಿ ಹಾಗೂ ಅಗತ್ಯ ಪೀಠೋಪಕರಣಗಳ ವ್ಯವಸ್ಥೆ ಕಡ್ಡಾಯವಾಗಿ ಇರಬೇಕು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾತನಾಡಿ, ಪರೀಕ್ಷೆಗಳು ಶಾಂತಿಯುತ ಹಾಗೂ ಪಾರದರ್ಶಕವಾಗಿ ನಡೆಯಲು ಅಗತ್ಯ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದ್ದು, ಪ್ರತಿಯೊಂದು ಪರೀಕ್ಷಾ ಕೇಂದ್ರದ ಮೇಲೆ ನಿಗಾ ವಹಿಸಲಾಗುವುದು ಎಂದು ತಿಳಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್ .ಬಿ. ಮಸನಾಯಕ ಮಾಹಿತಿ ನೀಡಿ, ಜಿಲ್ಲೆಯಲ್ಲಿ 10 ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾಗಿದ್ದು, 3,575 ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಪರೀಕ್ಷೆಯನ್ನು ಸುಸೂತ್ರವಾಗಿ ನಡೆಸಲು ಅಗತ್ಯ ಸಿದ್ಧತೆ ಪೂರ್ಣಗೊಂಡಿದೆ ಎಂದು ಹೇಳಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಪರೀಕ್ಷಾ ಕೇಂದ್ರಗಳ ಮುಖ್ಯಸ್ಥರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ನಿಧನ

### ಯಲ್ಲಮ್ಮ ಹಂಪಸಾಗರ



**ಹಗರಿಬೊಮ್ಮನಹಳ್ಳಿ:** ಪಟ್ಟಣದ ರಾಮನಗರ ರೈತರ ಓಣಿಯ ನಿವಾಸಿ, ದಿವಂಗತ ಹಂಪಸಾಗರ ತರಕಾರಿ ರಾಮಪ್ಪ ಅವರ ಪತ್ನಿ ಹಂಪಸಾಗರ ತರಕಾರಿ ಯಲ್ಲಮ್ಮ (85) ಅವರು ವಯೋಸಹಜ ಅನಾರೋಗ್ಯದಿಂದ ನಿಧನರಾದರು. ಮೃತರು ಓರ್ವ ಪುತ್ರ, ಐವರು ಪುತ್ರಿಯರು, ಮರಿ-ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ಜುಲೈ 31ರಂದು ಮಧ್ಯಾಹ್ನ 2 ಗಂಟೆಗೆ ಹಗರಿಬೊಮ್ಮನಹಳ್ಳಿಯಲ್ಲಿ ನಡೆಯಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

# ಈದ್-ಮಿಲಾದ್ ಪೂರ್ವಭಾವಿ ಸಭೆ ನಾಳೆ



**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರವಾದಿ ಹಜರತ್ ಮಹಮ್ಮದ್ ಪೈಗಂಬರ್ (ಸ.ಅ.) ಅವರ ಜನ್ಮದಿನವಾದ ಈದ್ -ಮಿಲಾದ್ ಆಚರಣೆಗೆ ಸಂಬಂಧಿಸಿದ ಪೂರ್ವಭಾವಿ ಸಭೆಯು ಆಗಸ್ಟ್ 2ರಂದು (ಭಾನುವಾರ) ಸಂಜೆ 4 ಗಂಟೆಗೆ ನಗರದ ಹಳೆಯ ಬಸ್ ನಿಲ್ದಾಣ ಸಮೀಪದ ಸರ್ಕಾರಿ ಉರ್ದು ಶಾಲೆ ನಂ. 2ರ ಆವರಣದಲ್ಲಿ ನಡೆಯಲಿದೆ.

ಜನಾಬ್ ಅಕ್ಬರಸಾಬ್ ಬಬಆರ್ ಅವರ ನೇತೃತ್ವದಲ್ಲಿ ನಡೆಯಲಿರುವ ಸಭೆಯಲ್ಲಿ ಗದಗ-ಬೆಟಗೇರಿ ಅವಳಿ ನಗರದ ಮುಸ್ಲಿಂ ಸಮುದಾಯದ ಮುಖಂಡರು, ವಿವಿಧ ಜಮಾತ್‌ಗಳ ಗುರು-ಹಿರಿಯರು, ಧರ್ಮಗುರುಗಳು ಹಾಗೂ ಯುವ ಮುಖಂಡರು ಭಾಗವಹಿಸಲಿದ್ದಾರೆ.

ಸಭೆಯಲ್ಲಿ ಕಳೆದ ವರ್ಷದ ಈದ್ -ಮಿಲಾದ್ ಸಮಿತಿಯ ಅಧ್ಯಕ್ಷ ಉಸ್ಮಾನ್ ಮಾಳೆಕೊಪ್ಪ ಹಾಗೂ ಸಮಿತಿ ಸದಸ್ಯರು ಆದಾಯ-ವೆಚ್ಚದ ಲೆಕ್ಕಪತ್ರ ಮಂಡಿಸಲಿದ್ದು, ಈ ವರ್ಷದ ಈದ್ -ಮಿಲಾದ್ ಆಚರಣೆಗೆ ಹೊಸ ಸಮಿತಿಯನ್ನು ರಚಿಸಿ ವಿವಿಧ ಕಾರ್ಯಕ್ರಮಗಳ ಕುರಿತು ಚರ್ಚೆ ನಡೆಸಲಾಗುವುದು.

ಸಮಸ್ತ ಮುಸ್ಲಿಂ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಸಭೆಗೆ ಆಗಮಿಸಿ ಈದ್ -ಮಿಲಾದ್ ಆಚರಣೆಯನ್ನು ಯಶಸ್ವಿಗೊಳಿಸಬೇಕು ಎಂದು ಪ್ರಚಾರ ಸಮಿತಿಯ ಅಧ್ಯಕ್ಷ ಶೌಕತ್ ಕಾತರಕಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಎಎಸ್‌ಐ ವಿಶ್ವನಾಥ ಬಡಿಗೇರಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಪೊಲೀಸ್ ಮಹಾನಿರ್ದೇಶಕ ಹಾಗೂ ಪೊಲೀಸ್ ಮಹಾನಿರೀಕ್ಷಕರಾದ ಡಾ. ಎಂ.ಎ. ಸಲೀಂ ಅವರಿಂದ ಡಿಜಿ-ಐಜಿಪಿ ಪ್ರಶಂಸನಾ ಪದಕಕ್ಕೆ ಭಾಜನರಾದ ಗದಗ ಗ್ರಾಮೀಣ ಪೊಲೀಸ್ ಠಾಣೆಯ ಸಹಾಯಕ ಪೊಲೀಸ್ ಉಪನಿರೀಕ್ಷಕ (ಎಎಸ್‌ಐ) ವಿಶ್ವನಾಥ ಬಡಿಗೇರ ಅವರನ್ನು ಗದಗ ಜಿಲ್ಲಾ ವಿಶ್ವಕರ್ಮ ಸಮಾಜದ ವಿವಿಧ ಸಂಘಟನೆಗಳ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ಕರ್ತವ್ಯನಿಷ್ಠೆ, ಪ್ರಾಮಾಣಿಕ ಸೇವೆ ಹಾಗೂ ಪೊಲೀಸ್ ಇಲಾಖೆಯಲ್ಲಿ ಸಲ್ಲಿಸಿದ ಅತ್ಯುತ್ತಮ ಸೇವೆಯನ್ನು ಪರಿಗಣಿಸಿ ಡಿಜಿ-ಐಜಿಪಿ ಪ್ರಶಂಸನಾ ಪದಕ ಲಭಿಸಿರುವುದು ಸಮಾಜಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಸಂಘಟನೆಗಳ ಮುಖಂಡರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಮಾಜದ ಹಿರಿಯರಾದ ಎನ್ .ಐ. ಪತ್ತಾರ, ವಿಶ್ವನಾಥ ವೈ. ಕಮ್ಮಾರ, ಮೌನೇಶ ಸಿ. ಬಡಿಗೇರ (ನರೇಗಲ್ಲ), ಗೋಪಾಲ ರಾ. ಬಡಿಗೇರ, ನಾಗರಾಜ ಕಮ್ಮಾರ, ಮಹೇಶ ಕಮ್ಮಾರ, ಶಂಕರ ಪತ್ತಾರ, ಮಹೇಶ ಬಡಿಗೇರ, ರಾಘವೇಂದ್ರ ಬಡಿಗೇರ, ಆನಂದ ಕಮ್ಮಾರ, ನಾಗರಾಜ ಬೆಂತೂರ, ವಿಶ್ವನಾಥ ಪತ್ತಾರ, ಈಶ್ವರ ಪತ್ತಾರ ಸೇರಿದಂತೆ ಸಮಾಜದ ಅನೇಕ ಮುಖಂಡರು ಉಪಸ್ಥಿತರಿದ್ದರು.

# ಪರೀಕ್ಷಾ ಅಕ್ರಮ ತಡೆ ಕಾಯ್ದೆ ಯುವಶಕ್ತಿಯ ಗೆಲುವು



**ವಿಜಯಸಾಕ್ಷಿ ಸುದ್ದಿ, ಗದಗ**

ಸ್ಪರ್ಧಾತ್ಮಕ ಪರೀಕ್ಷೆಗಳ ಪಾವಿತ್ರ್ಯ ಕಾಪಾಡುವ ಉದ್ದೇಶದಿಂದ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪರೀಕ್ಷಾ ಅಕ್ರಮ ತಡೆ ಕಾಯ್ದೆ ಯುವಶಕ್ತಿಯ ಗೆಲುವಾಗಿದ್ದು, ಈ ಕುರಿತು ಲೋಕಸಭೆಯಲ್ಲಿ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಮಂಡಿಸಿದ ವಾದಗಳು ಕಾಂಗ್ರೆಸ್‌ನ ಆರೋಪಗಳನ್ನು ಸಂಪೂರ್ಣವಾಗಿ ತಳ್ಳಿಹಾಕಿವೆ ಎಂದು ಬಿಜೆಪಿ ಮುಖಂಡ ಸಂತೋಷ ಅಕ್ಕಿ ಹೇಳಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸಾಮಾನ್ಯ ಕುಟುಂಬದ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳು ಸಮಾನ ಅವಕಾಶದ ವೇದಿಕೆಯಾಗಿದ್ದು, ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ವಿದ್ಯಾರ್ಥಿಗಳ ಭವಿಷ್ಯಕ್ಕೆ ಮಾಡುವ ಗಂಭೀರ ದ್ರೋಹವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರ ಅಭಿಪ್ರಾಯವನ್ನು ಉಲ್ಲೇಖಿಸಿದರು.

ಕಾಂಗ್ರೆಸ್ ಪಕ್ಷ ವಿದ್ಯಾರ್ಥಿಗಳ ಆತಂಕವನ್ನು ರಾಜಕೀಯ ಲಾಭಕ್ಕಾಗಿ ಬಳಸಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ ಅವರು, ಲೋಕಸಭೆಯಲ್ಲಿ ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ವಾದ್ರಾ ನೀಡಿದ ಹೇಳಿಕೆಗಳಲ್ಲಿ ವಾಸ್ತವಾಂಶಗಳ ಕೊರತೆ ಇತ್ತು ಎಂದು ಟೀಕಿಸಿದರು.


ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ 2010ರಲ್ಲೇ ಇಂತಹ ಮಸೂದೆ ತರಲು ಮುಂದಾಗಿದ್ದರೂ ಅದನ್ನು ಜಾರಿಗೊಳಿಸದ ಕಾರಣ ಪರೀಕ್ಷಾ ಅಕ್ರಮಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಸಾಧ್ಯವಾಗಿರಲಿಲ್ಲ ಎಂದು ತೇಜಸ್ವಿ ಸೂರ್ಯ ಸಂಸತ್ತಿನಲ್ಲಿ ವಿವರಿಸಿರುವುದಾಗಿ ಸಂತೋಷ ಅಕ್ಕಿ ತಿಳಿಸಿದ್ದಾರೆ.

ಹೊಸ ಕಾಯ್ದೆಯಡಿ ಪರೀಕ್ಷಾ ಅಕ್ರಮ ಎಸಗುವವರಿಗೆ 5ರಿಂದ 10 ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ 50 ಲಕ್ಷ ರೂಪಾಯಿವರೆಗೆ ದಂಡ, ಸಂಘಟಿತ ಅಕ್ರಮ ಜಾಲಗಳಿಗೆ 7ರಿಂದ 10 ವರ್ಷಗಳ ಜೈಲು ಶಿಕ್ಷೆ ಮತ್ತು 10 ಕೋಟಿ ರೂಪಾಯಿವರೆಗೆ ದಂಡ ಸೇರಿದಂತೆ ಕಠಿಣ ಶಿಕ್ಷೆಗಳ ಅವಕಾಶ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಅಲ್ಲದೆ, ಅಕ್ರಮದಲ್ಲಿ ಭಾಗಿಯಾದ ಸಂಸ್ಥೆಗಳ ವಿರುದ್ಧವೂ ಕಠಿಣ ಕ್ರಮ, ಆಸ್ತಿ ಮುಟ್ಟುಗೋಲು, ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ತನಿಖೆ ಹಾಗೂ ನಿಗದಿತ ಅವಧಿಯಲ್ಲಿ ಪ್ರಕರಣಗಳ ವಿಚಾರಣೆ ನಡೆಸುವಂತಹ ಕಟ್ಟುನಿಟ್ಟಿನ ವ್ಯವಸ್ಥೆ ಈ ಕಾಯ್ದೆಯಲ್ಲಿದೆ ಎಂದು ಹೇಳಿದ್ದಾರೆ.

ರಾಜಸ್ಥಾನದಲ್ಲಿ ಕಾಂಗ್ರೆಸ್ ಆಡಳಿತಾವಧಿಯಲ್ಲಿ ನಡೆದ ಪರೀಕ್ಷಾ ಅಕ್ರಮ ಪ್ರಕರಣಗಳು ಹಾಗೂ ಕರ್ನಾಟಕದಲ್ಲಿ ನಡೆದಿರುವ ಪರೀಕ್ಷಾ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣಗಳ ಬಗ್ಗೆ ಕಾಂಗ್ರೆಸ್ ಸ್ಪಷ್ಟನೆ ನೀಡಬೇಕೆಂದು ಅವರು ಆಗ್ರಹಿಸಿದ್ದಾರೆ. ಯುವಜನತೆಗೆ ರಾಜಕೀಯ ಘೋಷಣೆಗಳಿಗಿಂತ ಪಾರದರ್ಶಕ ಪರೀಕ್ಷಾ ವ್ಯವಸ್ಥೆ, ತ್ವರಿತ ತನಿಖೆ ಮತ್ತು ತಾಂತ್ರಿಕ ಸುಧಾರಣೆಗಳ ಅಗತ್ಯವಿದ್ದು, ಕೇಂದ್ರ ಸರ್ಕಾರ ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳುತ್ತಿದೆ ಎಂದು ಸಂತೋಷ ಅಕ್ಕಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುರುಪೂರ್ಣಿಮೆಗೆ ಮಾನವೀಯ ಸ್ಪರ್ಶ ವಯೋವೃದ್ಧರಿಗೆ ವಾಕರ್ ವಿತರಣೆ



**ವಿಜಯಸಾಕ್ಷಿ ಸುದ್ದಿ, ಗದಗ**

ನೊಂದವರ ಕಣ್ಣೀರು ಒರೆಸಿ, ಅವರಿಗೆ ಆತ್ಮವಿಶ್ವಾಸ ತುಂಬುವುದೇ ನಿಜವಾದ ಸೇವೆ ಎಂಬ ಸಂದೇಶ ಸಾರುವಂತೆ ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಗುರುಪೂರ್ಣಿಮೆ ಅಂಗವಾಗಿ ವಯೋವೃದ್ಧರು ಹಾಗೂ ವಿಕಲಚೇತನರಿಗೆ ವಾಕರ್‌ಗಳನ್ನು ವಿತರಿಸುವ ಮೂಲಕ ಮಾನವೀಯತೆ ಮೆರೆದಿತು.

ನಗರದ ಹಿರಿಯ ಸಮಾಜಸೇವಕರಾದ ಮಹೇಂದ್ರ ಕುಮಾರ ಸಂಗಾನಿ ದೇಣಿಗೆಯಾಗಿ ನೀಡಿದ ಎರಡು ಅತ್ಯಾಧುನಿಕ ವಾಕರ್‌ಗಳನ್ನು ಅಗತ್ಯವಿದ್ದ ಫಲಾನುಭವಿಗಳಿಗೆ ಕ್ಲಬ್ ವತಿಯಿಂದ ಹಸ್ತಾಂತರಿಸಲಾಯಿತು.

ವಯಸ್ಸು ಹಾಗೂ ಅಂಗವೈಕಲ್ಯದಿಂದ ನಡೆಯಲು ಪರದಾಡುತ್ತಿದ್ದವರಿಗೆ ವಾಕರ್ ವಿತರಣೆ ಹೊಸ ಆತ್ಮವಿಶ್ವಾಸ ತುಂಬುವ ಕೆಲಸ ಮಾಡಿತು.

ದಾನಿ ಮಹೇಂದ್ರಕುಮಾರ ಸಂಗಾನಿ ಅವರ ಸಾಮಾಜಿಕ ಕಾಳಜಿ ಹಾಗೂ ಲಯನ್ಸ್ ಕ್ಲಬ್ ಸದಸ್ಯರ ಸೇವಾಭಾವಕ್ಕೆ ಫಲಾನುಭವಿಗಳು ಕೃತಜ್ಞತೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ದಾನಿ ಮಹೇಂದ್ರ ಕುಮಾರ ಸಂಗಾನಿ, ಲಯನ್ಸ್ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ, ಕಾರ್ಯದರ್ಶಿ ಲಿಂಗರಾಜ ತೋಟದ, ಖಜಾಂಚಿ ರೇಣುಕಪ್ರಸಾದ ಶಿಗ್ಲಿಮಠ, ರಾಜಣ್ಣ ಮಲ್ಲಾಡದ ಸೇರಿದಂತೆ ಕ್ಲಬ್‌ನ ಸದಸ್ಯರು ಉಪಸ್ಥಿತರಿದ್ದರು.

**ಗುರುಪೂರ್ಣಿಮೆ ಎಂದರೆ ಕೃತಜ್ಞತೆ ಸಲ್ಲಿಸುವ ದಿನ. ಗುರು-ಹಿರಿಯರಿಗೆ ನೆರವಾಗುವ ಮೂಲಕ ಆ ಕೃತಜ್ಞತೆಯನ್ನು ವ್ಯಕ್ತಪಡಿಸಿದ್ದೇವೆ. ವಾಕರ್ ಅಗತ್ಯವಿದ್ದು ಖರೀದಿಸಲು ಸಾಧ್ಯವಾಗದವರು ಲಯನ್ಸ್ ಕ್ಲಬ್ ಪದಾಧಿಕಾರಿಗಳನ್ನು ಸಂಪರ್ಕಿಸಿದರೆ ಪರಿಶೀಲಿಸಿ ನೆರವು ನೀಡಲಾಗುವುದು.**

– **ಪ್ರವೀಣ ವಾರಕರ,** ಅಧ್ಯಕ್ಷರು, ಗದಗ-ಬೆಟಗೇರಿ ಲಯನ್ಸ್ ಕ್ಲಬ್

### ಗೊಜನೂರ – ಗುಂಜಳ ಪಿಎಂಜಿಎಸ್‌ವೈ ರಸ್ತೆಯಲ್ಲಿ ಪ್ರತಿಭಟನೆ

# ಭಾರೀ ವಾಹನಕ್ಕೆ ಬ್ರೇಕ್: ರಸ್ತೆ ಉಳಿಸಲು ರೈತರ ಪಟ್ಟು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪ್ರಧಾನಮಂತ್ರಿ ಗ್ರಾಮ ಸಡಕ್ ಯೋಜನೆ (ಪಿಎಂಜಿಎಸ್‌ವೈ) ಅಡಿಯಲ್ಲಿ ನಿರ್ಮಿಸಿರುವ ಗೊಜನೂರಗುಂಜಳ ರಸ್ತೆಯಲ್ಲಿ ಸೈರಂತಿಕ ಪವನ ವಿದ್ಯುತ್ ಕಂಪನಿಯ ಭಾರೀ ವಾಹನಗಳ ಸಂಚಾರದಿಂದ ರಸ್ತೆ ಹಾಗೂ ಸೇತುವೆಗಳು ಹಾಳಾಗುತ್ತಿವೆ ಎಂದು ಆರೋಪಿಸಿ ರೈತರು ಗುರುವಾರ ಭಾರೀ ವಾಹನ ತಡೆದು ಪ್ರತಿಭಟನೆ ನಡೆಸಿದರು.

2020ರಲ್ಲಿ ಅಂದಿನ ಶಾಸಕ ರಾಮಣ್ಣ ಲಮಾಣಿ ಅವರ ಪ್ರಯತ್ನದಿಂದ ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡ 5.6 ಕಿ.ಮೀ. ಉದ್ದದ ಈ ರಸ್ತೆ ಗೊಜನೂರ, ಮಾಡಳ್ಳಿ, ಯತ್ನಳ್ಳಿ ಹಾಗೂ ಗುಂಜಳ ಭಾಗದ ನೂರಾರು ಹೆಕ್ಟೇರ್ ಕೃಷಿಭೂಮಿಗೆ ಪ್ರಮುಖ ಸಂಪರ್ಕ ಕಲ್ಪಿಸುತ್ತಿದೆ.

ಕಳೆದ ಆರು ತಿಂಗಳಿನಿಂದ 60ರಿಂದ 70 ಟನ್ ತೂಕದ ಸಾಮಗ್ರಿಗಳನ್ನು ಸಾಗಿಸುವ ಭಾರೀ ವಾಹನಗಳು ಸಂಚರಿಸುತ್ತಿದ್ದು, ರಸ್ತೆ ಹಾಗೂ ಸೇತುವೆಗಳಿಗೆ ಹಾನಿಯಾಗುತ್ತಿದೆ. ಪವನ ವಿದ್ಯುತ್ ಯೋಜನೆ ಕಾಮಗಾರಿಗಾಗಿ ಸೈರಂತಿಕ ಕಂಪನಿ ಯಾವುದೇ ಅನುಮತಿ ಪಡೆಯದೇ ಈ ರಸ್ತೆ ಬಳಸುತ್ತಿದೆ.

ಈ ಕುರಿತು ಹಲವು ಬಾರಿ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದರು. ಗುರುವಾರ ಬೆಳಗ್ಗಿನಿಂದಲೇ ಕಂಪನಿಯ ಭಾರೀ ವಾಹನವನ್ನು ತಡೆದ ರೈತರು, ಇನ್ನು ಮುಂದೆ ಈ ರಸ್ತೆಯಲ್ಲಿ ಭಾರೀ ವಾಹನಗಳ ಸಂಚಾರಕ್ಕೆ ಅವಕಾಶ ನೀಡುವುದಿಲ್ಲ ಎಂದು ಪಟ್ಟು ಹಿಡಿದರು.

ಸ್ಥಳಕ್ಕೆ ಭೇಟಿ ನೀಡಿದ ತಹಸೀಲ್ದಾರ್ ಧನಂಜಯ ಎಂ. ರೈತರ ಅಹವಾಲು ಆಲಿಸಿ, ಕಂಪನಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ರಸ್ತೆ ಬಳಕೆಗೆ ಅಗತ್ಯ ಅನುಮತಿ ಪಡೆದಿರುವ ಬಗ್ಗೆ ಪ್ರಶ್ನಿಸಿದ ಅವರು, ರೈತರ ಸಂಪರ್ಕ ರಸ್ತೆಗೆ ಹಾನಿಯಾದರೆ ಕಾನೂನು ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಸೋಮವಾರ ಕಂಪನಿಯ ಹಿರಿಯ ಅಧಿಕಾರಿಗಳು ಗ್ರಾಮಸ್ಥರೊಂದಿಗೆ ಸಭೆ ನಡೆಸಲಿದ್ದು, ಅಲ್ಲಿಯವರೆಗೆ ಹೊಸ ಭಾರೀ ವಾಹನಗಳನ್ನು ತರದಂತೆ ಕಂಪನಿ ಅಧಿಕಾರಿಗಳು ಭರವಸೆ ನೀಡಿದರು.

ಆದರೆ ತಡೆಹಿಡಿದಿರುವ ವಾಹನವನ್ನು ಸಭೆ ನಡೆಯುವವರೆಗೆ ಬಿಡುವುದಿಲ್ಲ ಎಂದು ರೈತರು ಸ್ಪಷ್ಟಪಡಿಸಿದರು.

ಬಳಿಕ ರೈತರು ತಹಸೀಲ್ದಾರರಿಗೆ ಮನವಿ ಸಲ್ಲಿಸಿ, ಹಾನಿಗೊಳಗಾದ ರಸ್ತೆ ಹಾಗೂ ಸೇತುವೆಗಳನ್ನು ಕಂಪನಿಯ ವೆಚ್ಚದಲ್ಲಿಯೇ ದುರಸ್ತಿಪಡಿಸಬೇಕು ಹಾಗೂ ಭಾರೀ ವಾಹನಗಳ ಸಂಚಾರಕ್ಕೆ ಶಾಶ್ವತ ನಿಯಂತ್ರಣ ವಿಧಿಸಬೇಕು ಎಂದು ಒತ್ತಾಯಿಸಿದರು.

ಗ್ರೇಡ್ -2 ತಹಸೀಲ್ದಾರ್ ಮಂಜುನಾಥ ಅಮಾಸಿ, ಕಂದಾಯ ಅಧಿಕಾರಿ ಎಂ.ಎ. ನಧಾಫ್ , ಗ್ರಾಮ ಲೆಕ್ಕಾಧಿಕಾರಿಗಳು ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

ಪ್ರತಿಭಟನೆಯಲ್ಲಿ ರೈತ ಮುಖಂಡರಾದ ಶಿವರಾಜಗೌಡ ಪಾಟೀಲ, ಮಾಂತಗೌಡ ಪಾಟೀಲ, ಸಿದ್ದಲಿಂಗೇಶ ಸೊರಟೂರ, ಆರ್ .ಡಿ. ಪ್ರಭಯ್ಯನಮಠ, ಹೇಮಣ್ಣ ಕರೆಣ್ಣವರ, ಪ್ರವೀಣ ಮಾಡಳ್ಳಿ, ಚಂದ್ರಗೌಡ ದೊಡ್ಡಗೌಡ್ರ, ಚನ್ನವೀರಯ್ಯ ಹಿರೇಮಠ, ಮಾಂತೇಶ ಸೊರಟೂರ, ಫಕ್ಕಿರೇಶ ಕಲ್ಲೂರ, ಹನುಮಂತಪ್ಪ ಯಳವತ್ತಿ, ಬಸಪ್ಪ ಕಪ್ಪತ್ತನವರ, ಚನ್ನಪ್ಪ ಷಣ್ಮುಕಿ ಸೇರಿದಂತೆ ಅನೇಕ ರೈತರು ಭಾಗವಹಿಸಿದ್ದರು.

**ರೈತರ ಸಂಪರ್ಕ ರಸ್ತೆಗೆ ಯಾವುದೇ ಹಾನಿಯಾಗಲು ಅವಕಾಶ ನೀಡುವುದಿಲ್ಲ. ಅಗತ್ಯ ಅನುಮತಿ ಇಲ್ಲದೆ ರಸ್ತೆ ಬಳಕೆ ಮಾಡಿದರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು.**

– **ಧನಂಜಯ ಎಂ.,** ತಹಸೀಲ್ದಾರ್

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka